ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 50
5-8-2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 50

# ಎಸ್‌ಸಿ ಒಳ ಮೀಸಲಾತಿ: ನ್ಯಾ. ನಾಗಮೋಹನ್ ದಾಸ್ ಆಯೋಗ ವರದಿ ಸಲ್ಲಿಕೆ; ಮುಂದಿನ ಸಂಪುಟದಲ್ಲಿ ಮಂಡನೆ

**ಬೆಂಗಳೂರು:** ಪರಿಶಿಷ್ಟ ಜಾತಿಯಲ್ಲಿ(ಎಸ್‌ಸಿ) ಒಳಮೀಸಲಾತಿ ಕಲ್ಪಿಸುವ ಸಂಬಂಧ ರಚಿಸಲಾಗಿದ್ದ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಏಕವ್ಯಕ್ತಿ ಆಯೋಗ ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಂತಿಮ ವರದಿ ಸಲ್ಲಿಸಿದೆ.

ನ್ಯಾ. ನಾಗಮೋಹನ್ ದಾಸ್ ಅವರು ಇಂದು ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ರಾಜ್ಯದ ಹಲವಾರು ಸಚಿವರ ಸಮ್ಮುಖದಲ್ಲಿ ಒಳ ಮೀಸಲಾತಿ ಕುರಿತು 1,766 ಪುಟಗಳ ಸಮೀಕ್ಷಾ ವರದಿಯನ್ನು ಸಲ್ಲಿಸಿದರು.

ಬಳಿಕ ವರದಿಗಾರರೊಂದಿಗೆ ಮಾತನಾಡಿದ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರು, ಆಯೋಗದ ವರದಿಯು ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ಒದಗಿಸಬೇಕೆಂದು ಶಿಫಾರಸು ಮಾಡಿದೆ ಎಂದು ತಿಳಿಸಿದರು.

"ಸಂಪೂರ್ಣ ಡೇಟಾವನ್ನು ವಿಶ್ಲೇಷಿಸಿದ ನಂತರ, ಆಯೋಗವು ತನ್ನ ವರದಿಯನ್ನು ಕರ್ನಾಟಕ ಸರ್ಕಾರಕ್ಕೆ ಸಲ್ಲಿಸಿದೆ. ಇದು ಸುಮಾರು 1,766 ಪುಟಗಳ ಸಮೀಕ್ಷಾ ವರದಿಯಾಗಿದೆ. ಸಮೀಕ್ಷೆಯನ್ನು ಮೊಬೈಲ್ ಅಪ್ಲಿಕೇಶನ್ ಮೂಲಕ ಮಾಡಲಾಗಿದೆ. ಬಹಳ ದಿನಗಳಿಂದ, ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬೇಕು ಎಂಬುದು ನನ್ನ ಬಯಕೆಯಾಗಿತ್ತು. ಒಳ ಮೀಸಲಾತಿಯನ್ನು ಒದಗಿಸಬೇಕೆಂದು ನಾನು ಸರ್ಕಾರಕ್ಕೆ ಶಿಫಾರಸು ಮಾಡಿದ್ದೇನೆ" ಎಂದು



ನ್ಯಾಯಮೂರ್ತಿ ದಾಸ್ ಅವರು ಇಲ್ಲಿ ಮಾಧ್ಯಮಗಳಿಗೆ ತಿಳಿಸಿದರು.

"ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ಅನುಷ್ಠಾನದ ಬಗ್ಗೆ ಅಧ್ಯಯನ ಮಾಡಲು ರಚಿಸಲಾದ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ನೇತೃತ್ವದ ಸಮಿತಿಯು ಇಂದು ತನ್ನ ಅಂತಿಮ ವರದಿಯನ್ನು ಸಲ್ಲಿಸಿದೆ. ವರದಿ, ಸಮೀಕ್ಷೆಯ ದತ್ತಾಂಶ ಹಾಗೂ ಅನುಬಂಧಗಳು ಒಟ್ಟು ಸೇರಿ ಸುಮಾರು 1766 ಪುಟಗಳು ಮತ್ತು 6 ಶಿಫಾರಸುಗಳನ್ನು ಒಳಗೊಂಡ ವರದಿ ಇಂದು ಸಲ್ಲಿಕೆಯಾಗಿದ್ದು, ಸಾಮಾಜಿಕ ನ್ಯಾಯದ ಅನುಷ್ಠಾನದಲ್ಲಿ ಇದೊಂದು ಮಹತ್ವಪೂರ್ಣ ಮೈಲಿಗಲ್ಲು ಎಂದು ಭಾವಿಸಿದ್ದೇನೆ." ಎಂದು ಸಿಎಂ ಸಿದ್ದರಾಮಯ್ಯ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇನ್ನು ಈ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿರುವ ಸಿಎಂ ಸಿದ್ದರಾಮಯ್ಯ, ನ್ಯಾ. ನಾಗಮೋಹನ್‌ದಾಸ್ ಆಯೋಗ ಒಳಮೀಸಲಾತಿ ಸಂಬಂಧ ವರದಿ ನೀಡಿದೆ. ಅದರಲ್ಲಿ ಏನಿದೆ ಎಂದು ಇನ್ನೂ ನೋಡಿಲ್ಲ. ಆಗಸ್ಟ್ 7ರಂದು ಸಚಿವ ಸಂಪುಟ ಸಭೆಯಿದೆ. ಅದರಲ್ಲಿ ವರದಿಯನ್ನು ಮಂಡಿಸಿ ಚರ್ಚೆ ಮಾಡುತ್ತೇವೆ" ಎಂದು ಹೇಳಿದರು.

ಅಕ್ಟೋಬರ್ 2024 ರಲ್ಲಿ, ಕರ್ನಾಟಕ ಸರ್ಕಾರವು ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ಜಾರಿಗೊಳಿಸುವ ಬಗ್ಗೆ ಸಲಹೆ ನೀಡಲು ಏಕವ್ಯಕ್ತಿ ಆಯೋಗವನ್ನು ರಚಿಸಿತ್ತು.

## ಧರ್ಮಸ್ಥಳ ಪ್ರಕರಣ: ಗುರುತಿಸಿದ್ದ ಜಾಗದ ಬದಲಿಗೆ ಮತ್ತೊಂದು ಜಾಗದಲ್ಲಿ ಎಸ್‌ಐಟಿಗೆ ಮಾನವ ಅಸ್ಥಿಪಂಜರ ಅವಶೇಷ ಪತ್ತೆ!



**ಮಂಗಳೂರು:** ಧರ್ಮಸ್ಥಳ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷಿ-ದೂರುದಾರರು ತೋರಿಸಿರುವ ಸಮಾಧಿ ಸ್ಥಳಗಳಲ್ಲಿ ಅಗೆಯುವಿಕೆಯನ್ನು ನಡೆಸುತ್ತಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ) ಇಂದು ಪಾಯಿಂಟ್ 11ರ ಪಕ್ಕದಲ್ಲಿ ಬಳಿ ಮಾನವ ಅಸ್ಥಿಪಂಜರ ಅವಶೇಷಗಳು ಕಂಡುಬಂದಿವೆ.

ಸೋಮವಾರ ಬೆಳಗ್ಗೆ 11 ಗಂಟೆ ಸುಮಾರಿಗೆ ಸ್ಥಳ ಸಂಖ್ಯೆ 11 ರಲ್ಲಿ ಅಗೆಯುವಿಕೆಯನ್ನು ಪುನರಾರಂಭಿಸಲು ಎಸ್‌ಐಟಿ ಅಧಿಕಾರಿಗಳು ಮತ್ತು ದೂರುದಾರರು ಧರ್ಮಸ್ಥಳ ಗ್ರಾಮದ ಹೆದ್ದಾರಿ ಬದಿಯ ಅರಣ್ಯ ಪ್ರದೇಶವನ್ನು ಪ್ರವೇಶಿಸಿದ್ದರು. ಆದರೆ ಗುರುತಿಸಿದ ಸಮಾಧಿ ಸ್ಥಳ ಬಿಟ್ಟು ತಂಡ ಕಾಡಿನೊಳಕ್ಕೆ ಪ್ರವೇಶಿಸಿದ್ದು ಅಲ್ಲಿ ಮಾನವ ಅಸ್ಥಿಪಂಜರಗಳು ಪತ್ತೆಯಾಗಿವೆ ಎಂದು ಹೇಳಲಾಗುತ್ತಿದೆ. ಇನ್ನು ಪಾಯಿಂಟ್ 11ರ ಬಳಿ ಸಮಾಧಿ ಅಗೆದ ಜಾಗದಲ್ಲಿ ಅಸ್ಥಿಪಂಜರ ಸಿಕ್ಕಿದೆಯಾ? ಇಲ್ಲವ? ಎಂಬುದು ಇನ್ನೂ ತಿಳಿದುಬಂದಿಲ್ಲ. ಹೆಚ್ಚಿನ ವಿವರಗಳನ್ನು ಅಧಿಕಾರಿಗಳಿಂದ ನಿರೀಕ್ಷಿಸಲಾಗಿದೆ.

ಸ್ಥಳದಲ್ಲಿ ಪುರುಷನದ್ದೆಂದು ಶಂಕಿಸಲಾದ ಮಾನವ ಅಸ್ಥಿಪಂಜರ ಅವಶೇಷಗಳು ಹಗ್ಗ ಮತ್ತು ಕೆಲವು ಬಟ್ಟೆಗಳು ಪತ್ತೆಯಾಗಿವೆ ಎಂದು ಮೂಲಗಳು ತಿಳಿಸಿವೆ. ಸಾವಿಗೆ ನಿಖರವಾದ ಕಾರಣವನ್ನು ನಿರ್ಧರಿಸಲು ಅವಶೇಷಗಳನ್ನು ವಿಧಿವಿಜ್ಞಾನ ವಿಶ್ಲೇಷಣೆಗೆ ಕಳುಹಿಸಲಾಗುವುದು ಮತ್ತು ಪೊಲೀಸರು ಇದು ಆತ್ಮಹತ್ಯೆ ಪ್ರಕರಣ ಎಂದು ಶಂಕಿಸಿದ್ದಾರೆ.

## ಮಾತುಕತೆ ವಿಫಲ

# ಇಂದಿನಿಂದ ಸಾರಿಗೆ ನೌಕರರ ಮುಷ್ಕರ

**ಬೆಂಗಳೂರು, ಜು.4–** ಸಾರಿಗೆ ನೌಕರರ ಒಕ್ಕೂಟದ ಮುಖಂಡರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ನಡೆಸಿದ ಮಾತುಕತೆ ವಿಫಲವಾಗಿದೆ.ಈ ಹಿನ್ನೆಲೆಯಲ್ಲಿ ಇಂದಿನಿಂದ ಸಾರಿಗೆ ನೌಕರರು ಮುಷ್ಕರ ನಡೆಸಲಿದ್ದಾರೆ.

ವಿಧಾನಸಭೆಯ ಅಧಿವೇಶನದ ಬಳಿಕ ವೇತನ ಪರಿಷ್ಕರಣೆ ತೀರ್ಮಾನ ಮಾಡಲಾಗುವುದು ಎಂದು ಭರವಸೆ ನೀಡಿದರು. ಆದರೆ ಒಕ್ಕೂಟದ ನಾಯಕರು ಮುಷ್ಕರ ಕೈಬಿಡುವಂತೆ ಮುಖ್ಯಮಂತ್ರಿಗಳು




ಮಾಡಿದ ಮನವಿಯನ್ನು ಒಕ್ಕೂಟದ ನಾಯಕರು ತಿರಸ್ಕರಿಸಿದ್ದು ಮುಷ್ಕರ ನಡೆಸಲು ತೀರ್ಮಾನಿಸಿದ್ದಾರೆ.

1.15 ಲಕ್ಷ ಸರ್ಕಾರಿ ಸಾರಿಗೆ ನೌಕರ ಬಂದ್ ನಲ್ಲಿ ಭಾಗಿಯಾಗುವ ಸಾಧ್ಯತೆಯಿದೆ. ಹೀಗಾಗಿ ಇಂದು ರಾತ್ರಿಯಿಂದಲೇ ಬಸ್ ಸಂಚಾರ ಸ್ಥಗಿತವಾಗುವ ಸಾಧ್ಯತೆಯಿದೆ.

ರಾಜ್ಯಾದ್ಯಂತ ಸಾರಿಗೆ ನೌಕರರು ಸರ್ಕಾರದ ವಿರುದ್ಧ ಮತ್ತೆ ಸಮರ ಸಾರಿದ್ದು, ನಾಳೆಯಿಂದ (ಆಗಸ್ಟ್ 5) ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿದ್ದಾರೆ. ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಪಟ್ಟು ಹಿಡಿದಿರುವ ನೌಕರರು, ಸರ್ಕಾರದ ಮನವೊಲಿಕೆಗಳಿಗೆ ಜಗ್ಗಿಲ್ಲ. ಈ ಹಿನ್ನೆಲೆಯಲ್ಲಿ, ಮುಷ್ಕರವನ್ನು ತಪ್ಪಿಸಲು ಕೊನೆಯ ಕ್ಷಣದ ಕಸರತ್ತು ನಡೆದಿತ್ತು.

ಇಂದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆಯನ್ನು ಸಹ ನಡೆದಿದೆ. ಆದ್ರೆ, ಸಭೆಯಲ್ಲಿ ಸಿಎಂ ಬೇಡಿಕೆ ಈಡೇರಿಕೆ ಬಗ್ಗೆ ಯಾವುದೇ ತೀರ್ಮಾನ ಕೈಗೊಂಡಿಲ್ಲ. ಹೀಗಾಗಿ ಸಭೆ ವಿಫಲವಾಗಿದೆ.

## ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಎಸಿ ಸಂತೋಷ್ ಪಾಟೀಲ್ ಮಾಹಿತಿ

# ಸಾರ್ವಜನಿಕರಿಗೆ, ಮಹಿಳೆಯರಿಗೆ ವಿಶೇಷವಾಗಿ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಸುಗಮ ಸಂಚಾರಕ್ಕೆ ಖಾಸಗಿ ಬಸ್ ವ್ಯವಸ್ಥೆ

**ದಾವಣಗೆರೆ :** ಸಾರ್ವಜನಿಕ ಮತ್ತು ಶಾಲಾ-ಕಾಲೇಜು ಮಕ್ಕಳಿಗೆ, ವೃದ್ದರಿಗೆ ಗರ್ಭಿಣಿ ಮಹಿಳೆಯರಿಗೆ ಯಾವುದೇ ರೀತಿ ತೊಂದರೆ ಉಂಟಾಗದಂತೆ ಖಾಸಗಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸಿ ಸುಗಮ ಸಂಚಾರಕ್ಕಾಗಿ ಅನುವು ಮಾಡಿಕೊಡಲಾಗುವುದು ಎಂದು ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್ ತಿಳಿಸಿದರು.

ನಗರದ ರೈಲ್ವೇ ನಿಲ್ದಾಣದ ಬಳಿ ಇರುವ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ವೇತನ ಪರಿಷ್ಕರಣೆ ಮತ್ತು ಇನ್ನಿತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ ಕೆಎಸ್‌ಆರ್‌ಟಿಸಿ ನೌಕರರು ಆಗಸ್ಟ್ 5ರಿಂದ ಅನಿರ್ದಿಷ್ಟಾವಧಿ ಮುಷ್ಕರದಿಂದ ಕರೆ ನೀಡಿರುವುದರಿಂದ ಜಿಲ್ಲೆಯಲ್ಲಿ ಸಂಚಾರಕ್ಕೆ ತೊಂದರೆ-ಯುಂಟಾಗದಂತೆ ಖಾಸಗಿ ಬಸ್ ಮಾಲೀಕರೊಂದಿಗೆ ಜಂಟಿ ಮಾತುಕತೆ ನಡೆಸಿ ಸಾರ್ವಜನಿಕರಿಗೆ, ಮಹಿಳೆಯರಿಗೆ, ವೃದ್ಧರು, ಗರ್ಭಿಣಿ ಮಹಿಳೆಯರಿಗೆ ಮತ್ತು




ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಎಲ್ಲಾ ಮಾರ್ಗಗಳಿಗೆ ಬಸ್ ಸಂಚಾರಕ್ಕೆ ಅಗತ್ಯ ಸಿದ್ದತೆ ಕೈಗೊಳ್ಳಲಾಗಿದೆ.

ಜಿಲ್ಲೆಯಲ್ಲಿ ಒಟ್ಟು 126 ಮಾರ್ಗಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್ ಸಂಚರಿಸುತ್ತಿದ್ದು, ಮುಷ್ಕರದ ವೇಳೆ ದಾವಣಗೆರೆ ಜಿಲ್ಲೆಗೆ ಸಂಬಂಧಿಸಿದಂತೆ ಸ್ಥಳೀಯವಾಗಿ 56 ಸಂಚಾರಿ ಮಾರ್ಗಗಳಲ್ಲಿ ತೋದರೆಯುಂಟಾಗಬಹುದು ಎಂದು ಗುರುತಿಸಲಾಗಿದೆ. ಹಾಗಾಗಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆಯಾಗದಂತೆ ದಾವಣಗೆರೆಗೆ ಸಂಬಂದಿಸಿದಂತೆ 30 ಖಾಸಗಿ ಬಸ್ ಅವಶ್ಯಕತೆ ಇದ್ದು, 261 ಬಾರಿ ಸಂಚಾರ ಬೇಡಿಕೆ ಇದೆ. ಜಗಳೂರು ತಾಲ್ಲೂಕಿಗೆ 5, ಹರಿಹರ -50 ಹಾಗೂ ಹೊನ್ನಾಳಿ ತಾಲ್ಲೂಕಿಗೆ 10 ಬಸ್‌ಗಳು ಸೇರಿ ಒಟ್ಟು 95 ಖಾಸಗಿ ಬಸ್‌ಗಳ ಅವಶ್ಯಕತೆ ಇದ್ದು, ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಇಲಾಖೆ ಹಾಗೂ ಕೆಎಸ್‌ಆರ್‌ಟಿಸಿ ಇಲಾಖೆ ಅಧಿಕಾರಿಗಳು ಖಾಸಗಿ ಬಸ್ ಮಾಲೀಕರೊಂದಿಗೆ ಮಾತುಕತೆ ನಡೆಸಿ ಒಪ್ಪಿಗೆ ಪಡೆದುಕೊಳ್ಳಲಾಗಿದೆ. ಖಾಸಗಿ ಬಸ್ ಮಾಲೀಕರು ಸುಗಮ ಸಂಚಾರ ವ್ಯವಸ್ಥೆಗೆ ಸಹ ಸಹಕರಿಸುವುದಾಗಿ ಭರವಸೆ ನೀಡಿದ್ದು ಜಿಲ್ಲಿಯಲ್ಲಿ ಯಾವುದೇ ರೀತಿಯ ತೊಂದರೆಗಳಿಗೆ ಅವಕಾಶವಿಲ್ಲದಂತೆ ಅಗತ್ಯ ಕ್ರಮವಹಿಸಲಾಗಿದೆ ಎಂದ ಅವರು, ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರತಿದಿನ ಸರಾಸರಿ 2.10 ಲಕ್ಷ ಪ್ರಯಾಣಿಕರು ಸಂಚರಿಸಿದ್ದಾರೆ. ಅದಕ್ಕೆ ಅನುಗುಣವಾಗಿ ಪ್ರಾಥಮಿಕವಾಗಿ ಜಿಲ್ಲೆಯಲ್ಲಿ ಯಾವುದೇ ರೀತಿಯಲ್ಲಿ ಸಮಸ್ಯೆ ಉದ್ಭವವಾಗದಂತೆ ಸಕಲ ಸಿದ್ದತೆಗಳನ್ನು ಕೈಗೊಳ್ಳಲಾಗಿದೆ. ಒಂದು ವೇಳೆ ಅನಿರ್ದಿಷ್ಟಾವಧಿ ಮುಷ್ಕರ ಮುಂದುವರೆಲ್ಲಿ ಅಗತ್ಯಕ್ಕೆ ತಕ್ಕಂತೆ ಹೆಚ್ಚುವರಿ ಬಸ್ ವ್ಯವಸ್ಥೆಯನ್ನು ಸಹ ಕಲ್ಪಿಸಲಾಗುವುದು ಎಂದರು. ಅಷ್ಟೇ ಅಲ್ಲದೇ ಮುಷ್ಕರದಿಂದ ಸಾರ್ವಜನಿಕರಿಗೆ ತೊಂದರೆ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಈಗಾಗಲೇ ಸಹಾಯವಾಣಿ ಸಂಖ್ಯೆಯನ್ನು ಸಹ ಆರಂಭಿಸಲಾಗಿದೆ. ಕೆಎಸ್‌ಆರ್‌ಟಿಸಿ ನಿಯಂತ್ರಣ ಕೊಠಡಿ ದೂರವಾಣಿ ಸಂ-ಖ್ಯೆ 7022030175, ಪ್ರಾದೇಶಿಕ ಸಾರಿಗೆ ಕಚೇರಿ - 08192259848, ಪೊಲೀಸ್ ಕಚೇರಿ ನಿಯತ್ರಣ ಕೊಠಡಿ - 9480803200 ಹಾಗೂ ಜಿಲ್ಲಾಧಿಕಾರಿಗಳ ಕಚೇರಿ - 1077 ಗೆ ಸಂಪರ್ಕಿಸಬಹುದು ಎಂದರು.

**ಟಿಕೆಟ್ ದರ ಹೆಚ್ಚು ವಸೂಲಿ ಮಾಡಿದಲ್ಲಿ ಕ್ರಮ:** ಖಾಸಗಿ ಬಸ್‌ಗಳಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ಟಿಕೆಟ್ ದರ ವಸೂಲಾತಿ ಮಾಡಿದಲ್ಲಿ ಸಂಬಂಧಪಟ್ಟ ಮಾಲೀಕರ ವಿರುದ್ದ ಸೂಕ್ತ ಕ್ರಮ ಅಥವಾ ಪರವಾನಗಿ ರದ್ದುಪಡಿಸಲು ಕ್ರಮಕೈಗೊಳ್ಳಲಾಗುವುದು ಎಂದು ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್ ತಿಳಿಸಿದರು.

ಈ ವೇಳೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಭಗವಾನ್ ದಾಸ್, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಕಿರಣ್ ಕುಮಾರ್ ಎಸ್ ಬಸಾಪುರ, ಫಕ್ರುದ್ದೀನ್ ಇದ್ದರು.

### ತರಗನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ

## ಮೂವರು ಅವಿರೋಧ ಆಯ್ಕೆ



**ಹೊನ್ನಾಳಿ :** ತಾಲೂಕಿನ ತರಗನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 12 ಸ್ಥಾನಗಳಿಗೆ ಚುನಾವಣೆ ನಡೆಯಿತು.

ಸಾಲಗಾರರ 11 ಸ್ಥಾನಗಳ ಪೈಕಿ ಮೂವರು ಅವಿರೋಧವಾಗಿ ಆಯ್ಕೆಯಾಗಿದ್ದರು. ಉಳಿದ 8 ಸ್ಥಾನಗಳಿಗೆ ಹಾಗೂ ಸಾಲಗಾರರ ಒಂದು ಸ್ಥಾನಕ್ಕೆ ಚುನಾವಣೆ ನಡೆಯಿತು.

8 ಸ್ಥಾನಗಳ ಪೈಕಿ 5 ಸಾಮಾನ್ಯ ಕ್ಷೇತ್ರ, 2 ಮಹಿಳಾ ಮೀಸಲು ಕ್ಷೇತ್ರ, ಬ ವರ್ಗ 1 ಸ್ಥಾನಕ್ಕೆ ಒಟ್ಟು 14 ಜನ ಸ್ಪರ್ಧೆ ಮಾಡಿದ್ದರು.

ವಿಜೇತರು : ಭಾನುವಾರ ತಡರಾತ್ರಿವರೆಗೂ ಮತ ಎಣಿಕೆ ನಡೆಯಿತು ಟಿ. ಜಿ. ರಮೇಶ್‌ಗೌಡ, ಎಸ್.ಜಿ. ಬಸವನಗೌಡ, ಎಸ್.ಜಿ. ವೀರಪ್ಪ ಗೌಡ, ಎನ್. ಈಶ್ವರಪ್ಪ, ವಿಶ್ವರಾಧ್ಯ ಇವರು ಸಾಮಾನ್ಯ ಕ್ಷೇತ್ರದಿಂದ ವಿಜೇತರಾದರು.

ಮಹಿಳಾ ಮೀಸಲು ಕ್ಷೇತ್ರದಿಂದ ಮಂಜುಳಮ್ಮ ಚಿದಾನಂದಪ್ಪ, ಯಶೋಧಮ್ಮ ಸಿದ್ದಪ್ಪ ಇವರು ಚುನಾಯಿತರಾದರು. ಪ್ರವರ್ಗ ಬ ದಿಂದ ವಿಜಯ ಇವರು ಚುನಾಯಿತರಾದರು.

ಅವಿರೋಧ ಆಯ್ಕೆಯಾದವರು : ಹಿಂದುಳಿದ ಅ ವರ್ಗ ದಿಂದ ಎಸ್.ಆರ್. ಲೋಕಪ್ಪ, ಪರಿಶಿಷ್ಟ ಜಾತಿಯಿಂದ ಶಾಂತನಾಯ್ಕ, ಪರಿಶಿಷ್ಟ ಪಂಗಡದಿಂದ ಟಿ. ರಾಜಪ್ಪ ಅವಿರೋಧವಾಗಿ ಆಯ್ಕೆಯಾದರು.

ಸಾಲಗಾರರಲ್ಲದ ಕ್ಷೇತ್ರದಿಂದ ಇಬ್ಬರು ಸ್ಪರ್ಧೆ ಮಾಡಿದ್ದು ಅವರ ಪೈಕಿ ಬಸವನಗೌಡ ( ಸಾ) ಅವರು ಚುನಾಯಿತರಾದರು.

ಚುನಾವಣಾಧಿಕಾರಿಯಾಗಿ ವಾಸಪ್ಪ ವಾಲ್ಮೀಕಿ ಕರ್ತವ್ಯ ನಿರ್ವಹಿಸಿದರು. ಸಹಕಾರ ಅಭಿವೃದ್ಧಿ ಅಧಿಕಾರಿ ನವೀನ್‌ಕುಮಾರ್, ಸಿಬ್ಬಂಧಿ ಧರ್ಮಪ್ಪ ಹಾಜರಿದ್ದರು.

ಟಿ. ಜಿ. ರಮೇಶ್‌ಗೌಡ ಅವರು ಸತತವಾಗಿ 11 ಬಾರಿ ಚುನಾವಣೆಗೆ ಸ್ಪರ್ಧೆ ಮಾಡಿದ್ದು, 11 ಭಾರಿಯೂ ಆಯ್ಕೆಯಾಗುವ ಮೂಲಕ ಐತಿಹಾಸಿಕ ದಾಖಲೆಯಾಗಿದೆ.

4ಎಚ್‌ಎನ್‌ಎಲ್1ಚಿತ್ರ1 : ಹೊನ್ನಾಳಿ ತಾಲೂಕಿನ ತರಗನಹಳ್ಳಿ ಪ್ರಾ ಕೃ ಪ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಆಯ್ಕೆಯಾದ 12 ಜನ ನೂತನ ನಿರ್ದೇಶಕರುಗಳು.

## ರಸಗೊಬ್ಬರ ಸರಬರಾಜು ಮಾಡುವಂತೆ ಆಗ್ರಹಿಸಿ ಜಿಲ್ಲಾಡಳಿತಕ್ಕೆ ಜೆಡಿಎಸ್ ಮನವಿ



**ಚಿಕ್ಕಮಗಳೂರು:** ರೈತರಿಗೆ ಅಗತ್ಯವಾಗಿ ಬೇಕಾಗಿರುವ ಯೂರಿಯಾ-ಡಿಎಪಿ ರಸಗೊಬ್ಬರವನ್ನು ಅತೀ ಶೀಘ್ರ ವಿತರಣೆ ಮಾಡುವಂತೆ ಆಗ್ರಹಿಸಿ ಇಂದು ಜೆಡಿಎಸ್ ವತಿಯಿಂದ ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ನಂತರ ಮಾತನಾಡಿದ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ರಂಜನ್ ಅಜಿತ್ ಕುಮಾರ್, ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿರುವುದರಿಂದ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಿದ್ದು, ಈ ನಿಟ್ಟಿನಲ್ಲಿ ರೈತರಿಗೆ ಅಗತ್ಯವಾಗಿ ಬೇಕಾಗಿರುವ ಬಿತ್ತನೆ ಬೀಜ, ರಸಗೊಬ್ಬರ ಸೇರಿದಂತೆ ರೈತರಿಗೆ ಅಗತ್ಯ ಕೃಷಿ ಪರಿಕರಗಳನ್ನು ಕೂಡಲೇ ಸರಬರಾಜು ಮಾಡುವಂತೆ ಕೃಷಿ ಸಚಿವರನ್ನು ಒತ್ತಾಯಿಸಿದರು.

ಜಿಲ್ಲೆಯ ಜ್ವಲಂತ ಸಮಸ್ಯೆಗಳ ಬಗ್ಗೆ ಜೆಡಿಎಸ್ ಹೋರಾಟ ರೂಪಿಸಲಿದೆ. ಕಾಡು ಪ್ರಾಣಿಗಳು, ಮಾನವ ಸಂಘರ್ಷ ಒಂದೆಡೆಯಾದರೆ, ಕಾಡಾನೆಗಳ ದಾಳಿಗೆ ತುತ್ತಾಗುತ್ತಿರುವ ಕಾರ್ಮಿಕರ ರಕ್ಷಣೆ ಮಾಡಬೇಕು, ಜೊತೆಗೆ ವೈಜ್ಞಾನಿಕ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ರೈತರನ್ನು ಒಕ್ಕಲೆಬ್ಬಿಸುವ ಸಲುವಾಗಿ ಮದಗದ ಕೆರೆ ಬಳಿ ಚಿರತೆ ತಂದುಬಿಟ್ಟು ಅರಣ್ಯ ಇಲಾಖೆ ಆ ಭಾಗದ ರೈತರಿಗೆ ತೊಂದರೆ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಮಲೆನಾಡು ಭಾಗದಲ್ಲಿ ಗಿಡ್ಡ ತಳಿ ಹಸುಗಳನ್ನು ಸಾಕಾಣೆ ಮಾಡಿದ್ದು, ಅರಣ್ಯ ಸಚಿವರು ಅರಣ್ಯದ ಒಳಭಾಗದಲ್ಲಿ ದನಗಳನ್ನು ಮೇಯಿಸಲು ಬಿಡಬಾರದು ಎಂದು ಆದೇಶ ಮಾಡಿರುವುದು ಸರಿಯಾದ ಕ್ರಮವಲ್ಲ. ಕೂಡಲೇ ಈ ಆದೇಶವನ್ನು ವಾಪಾಸ್ ಪಡೆಯುವಂತೆ ಹೇಳಿದರು.

ರೈತರಿಗೆ ಆಗುತ್ತಿರುವ ಅನ್ಯಾಯವನ್ನು ಖಂಡಿಸಿ ಸರ್ಕಾರದ ವಿರುದ್ಧ ಜೆಡಿಎಸ್ ಸಧ್ಯದಲ್ಲೇ ಉಗ್ರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಉಪಾಧ್ಯಕ್ಷ ಲಕ್ಷ್ಮಣ್‌ಗೌಡ, ಮುಖಂಡರಾದ ಜಿ.ಹೆಚ್ ಚಂದ್ರಪ್ಪ, ಸಿ.ಕೆ. ಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

## ಸೂರಟೂರು ಗ್ರಾ.ಪಂ. ಅಧ್ಯಕ್ಷೆಯಾಗಿ ನಾಗರತ್ನಬಾಯಿ , ಉಪಾಧ್ಯಕ್ಷೆಯಾಗಿ ಟಿ.ಎಸ್.ಸುಮಾ ಅವಿರೋಧ ಆಯ್ಕೆ



**ಹೊನ್ನಾಳಿ :** ತಾಲೂಕಿನ ಸೂರಟೂರು ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷೆಯಾಗಿ ನಾಗರತ್ನಬಾಯಿ ಹಾಗೂ ಉಪಾಧ್ಯಕ್ಷೆಯಾಗಿ ಟಿ.ಎಸ್.ಸುಮಾ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾ-ರೆ ಎಂದು ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಪಶು ಇಲಾಖೆ ಅಧಿಕಾರಿ ಡಾ.ವಿಶ್ವನಟೇಶ್ ತಿಳಿಸಿದರು.

ಈ ಹಿಂದೆ ಅಧ್ಯಕ್ಷರಾಗಿದ್ದ ಮರಿಯಪ್ಪ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ಚುನಾವಣೆ ಪ್ರಕ್ರಿಯೇ ನಡೆದು, ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ನಾಗರತ್ನಬಾಯಿ ಅವರು ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದಾಗಿ ಅವರನ್ನು ನೂತನ ಅಧ್ಯಕ್ಷೆಯಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಲಾಯಿತು,

ಈ ಹಿಂದೆ ಉಪಾಧ್ಯಕ್ಷೆಯಾಗಿದ್ದ ರಾಧಮ್ಮ ಅವರ ರಾಜೀನಾಮೆಯಿಂದ ತೆರವಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಟಿ.ಎಸ್.ಸುಮಾ ಅವರೊಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ನೂತನ ಉಪಾಧ್ಯಕ್ಷೆಯಾಗಿ ಟಿ.ಎಸ್.ಸುಮಾ ಅವರ ಆಯ್ಕೆಯನ್ನು ಅವಿರೋಧ ಎಂದು ಚುನಾವಣಾಧಿಕಾರಿಗಳು ಘೋಷಿಸಿದರು.

ಸೂರಟೂರು ಗ್ರಾಮ ಪಂಚಾಯಿತಿ 10 ಸದಸ್ಯ ಬಲ ಇದ್ದು ಚುನಾವಣೆ ಪ್ರಕ್ರೀಯೆಯಲ್ಲಿ 9 ಜನ ಮಾತ್ರ ಹಾಜರಿದ್ದು ಒಬ್ಬ ಸದಸ್ಯರು ಗೈರಾಗಿದ್ದರು.ಸದಸ್ಯರುಗಳಾದ ಮರಿಯಪ್ಪ, ರಾಧಮ್ಮ,ಬಸವನಗೌಡಪಾಟೀಲ್,ಪರಶುರಾಮಪ್ಪ,ಕೆಂಚಮ್ಮ,ರಂಜಿತ,ವಿರುಪಕ್ಷಪ್ಪ ಹಾಗೂ ಗ್ರಾಮ ಪಂಚಾಯಿತಿ ಪಿ.ಡಿ.ಓ.ರಾಘವೇಂದ್ರ,ಕಾರ್ಯದರ್ಶಿ ಹಳದಪ್ಪ, ಸಿಬ್ಬಂದಿಗಳು, ಹಾಗೂ ಎಚ್.ಕಡದಕಟ್ಟೆ ಗ್ರಾಮದ ಮುಖಂಡರುಗಳು ಇದ್ದರು.

4ಎಚ್‌ಎನ್‌ಎಲ್2ಚಿತ್ರ1 : ತಾಲೂಕಿನ ಸೂರಟೂರು ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷೆಯಾಗಿ ನಾಗರತ್ನಬಾಯಿ ಹಾಗೂ ಉಪಾಧ್ಯಕ್ಷೆಯಾಗಿ ಟಿ.ಎಸ್.ಸುಮಾ ಅವರು ಅವಿರೋಧವಾಗಿ ಅಯ್ಕೆಯಾದ ಸಂದರ್ಭದಲ್ಲಿ ಗ್ರಾಮಪಂಚಾಯಿತಿ ಸದಸ್ಯರುಗಳು ಅಭಿನಂದಿಸಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ. ನಿಮ್ಮ ಉತ್ಸಾಹ ನಿಮ್ಮ ಪ್ರೀತಿಯನ್ನು ಸಂಕಟಕ್ಕೆ ಸಿಲುಕಿಸಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

### ವೃಷಭ ರಾಶಿ

ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ತಾತ್ಕಾಲಿಕ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ. ಪ್ರಣಯದ ಅವಕಾಶಗಳಿವೆ – ಆದರೆ ಅವು ಕ್ಷಣಿಕವಾಗಿರುತ್ತವೆ.

### ಮಿಥುನ ರಾಶಿ

ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ.

### ಕರ್ಕ ರಾಶಿ

ನಿಮ್ಮ ಶಕ್ತಿಯನ್ನು ಸ್ವಯಂ ಸುಧಾರಣೆ ಯೋಜನೆಗಳಲ್ಲಿ ಹಾಗೂ ನಿಮ್ಮನ್ನು ಉತ್ತಮವಾಗಿಸುವ ಯೋಜನೆಗಳಲ್ಲಿ ಹಾಕಿ. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ಧರ್ಮಕಾರ್ಯಗಳು ಅಥವಾ ಶುಭಕರವಾದ ಸಮಾರಂಭಗಳನ್ನು ಮನೆಯಲ್ಲಿ ನಡೆಸಬೇಕು.

### ಸಿಂಹ ರಾಶಿ

ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸಲು ಗಂಭೀರ ಪ್ರಯತ್ನಗಳನ್ನು ಮಾಡಿ. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಇಂದು ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ. ಹೊಸ ನೋಟ– ಹೊಸ ಉಡುಪು– ಹೊಸ ಸ್ನೇಹಿತರು ನೀವು ಇಂದು ನಿಮಗಾಗಿರಬಹುದು. ಮದುವೆಯಾಗುವವರು ತಮ್ಮ ಪ್ರೇಮಿ ಸಂತೋಷದ ಮೂಲವೆಂದು ಕಂಡುಕೊಳ್ಳುತ್ತಾರೆ. ನೀವು ಧೀರ್ಘಕಾಲದಿಂದ ತೊಡಗಿಕೊಂಡಿರುವ ಒಂದು ಪ್ರಮುಖ ಪ್ರಾಜೆಕ್ಟ್– ತಡವಾಗುತ್ತದೆ.

### ಕನ್ಯಾ ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ನಿಮ್ಮ ಸಂಗಾತಿಯ ಆರೋಗ್ಯ ಒತ್ತಡ ಮತ್ತು ಆತಂಕಕ್ಕೆ ಕಾರಣವಾಗಬಹುದು ಸ್ವಲ್ಪ ಸಂಘರ್ಷದ ಹೊರತಾಗಿಯೂ, ನಿಮ್ಮ ಪ್ರೀತಿಯ ಜೀವನವು ಇಂದು ಉತ್ತಮವಾಗಿರುತ್ತದೆ ಮತ್ತು ನೀವು ನಿಮ್ಮ ಸಂಗಾತಿಯನ್ನು ಸಂತೋಷವಾಗಿಡಲು ಯಶಸ್ವಿಯಾಗುತ್ತೀರಿ ಅರ್ಹ ನೌಕರರಿಗೆ ಬಡ್ತಿ ಅಥವಾ ಆರ್ಥಿಕ ಲಾಭ.

### ತುಲಾ ರಾಶಿ

ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ತಾತ್ಕಾಲಿಕ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ನೀವು ಎಲ್ಲರ ಬೇಡಿಕೆಗಳನ್ನೂ ಪೂರೈಸಲು ಪ್ರಯತ್ನಿಸಿದಲ್ಲಿ ವಿವಿಧ ದಿಕ್ಕುಗಳಲ್ಲಿ ಹರಿದು ಹೋಗುತ್ತೀರಿ. ನಿಮ್ಮ ಪ್ರೀತಿ ಸಂಗಾತಿಯ ಒಂದುಹೊಸ ಅದ್ಭುತ ಭಾಗವನ್ನು ನೀವಿಂದು ನೋಡಬಹುದು. ನಿಮ್ಮ ಕೆಲಸಗಳಿಗೆ ಬೇರೆಯವರು ಗೌರವ ಪಡೆಯಲು ಬಿಡಬೇಡಿ.

### ವೃಶ್ಚಿಕ ರಾಶಿ

ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು.

### ಧನು ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ಯಾರಾದರೂ ನಿಮಗೆ ಹಾನಿ ಮಾಡಲು ಪ್ರಯತ್ನಿಸಬಹುದು ಬಲವಾದ ಶಕ್ತಿಗಳು ನಿಮ್ಮ ವಿರುದ್ಧ ಕೆಲಸ ಮಾಡುತ್ತಿರುತ್ತವೆ ನೀವು ಕಾರ್ಯಗಳನ್ನು ತಪ್ಪಿಸಬೇಕು ಇವು ವ್ಯಾಜ್ಯಗಳಿಗೆ ಕಾರಣವಗಬಹುದು.

### ಮಕರ ರಾಶಿ

ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ ಹಾಗೂ ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ.

### ಕುಂಭ ರಾಶಿ

ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ. ಬೇಕಷ್ಟು ಮೊದಲೇ ಯೋಜಿಸಿದ ಪ್ರಯಾಣದ ಕಾರ್ಯಕ್ರಮಗಳು ಕುಟುಂಬದಲ್ಲಿನ ಆರೋಗ್ಯದ ಸಮಸ್ಯೆಗಳಿಂದಾಗಿ ಮುಂದೂಡಲಾಗಬಹುದು.

### ಮೀನ ರಾಶಿ

ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು. ಬೇಕಷ್ಟು ಮೊದಲೇ ಯೋಜಿಸಿದ ಪ್ರಯಾಣದ ಕಾರ್ಯಕ್ರಮಗಳು ಕುಟುಂಬದಲ್ಲಿನ ಆರೋಗ್ಯದ ಸಮಸ್ಯೆಗಳಿಂದಾಗಿ ಮುಂದೂಡಲಾಗಬಹುದು. ನಿಮ್ಮ ಕತ್ತಲೆಯ ಜೀವನ ನಿಮ್ಮ ಸಂಗಾತಿಗೆ ಒತ್ತಡ ತರಬಹುದು.

# ಬಡವರ ಕೈಯಲ್ಲಿ ಹಣ ಬಂದಾಗ ಮಾತ್ರ ದೇಶದ ಪ್ರಗತಿ



**ಶಿವಮೊಗ್ಗ:** ಬಡವರ ಕೈಯಲ್ಲಿ ಹಣ ಬಂದಾಗ ಮಾತ್ರ ದೇಶದ ಪ್ರಗತಿಯಾಗಲಿದ್ದು, ಬಡವರಿಗಾಗಿ ರೂಪಿಸಿರುವ ಯೋಜನೆಗಳನ್ನು ಅವರಿಗೆ ಸಮರ್ಪಕವಾಗಿ ತಲುಪಿಸಬೇಕು ಎಂದು ರಾಜ್ಯ ಕಾರ್ಮಿಕ ಸಚಿವರಾದ ಸಂತೋಷ್ ಎಸ್. ಲಾಡ್ ಕರೆ ನೀಡಿದರು

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಇವರ ಸಹಯೋಗದೊಂದಿಗೆ ಸೋಮವಾರ ನಗರದ ಲಗಾನ್ ಕಲ್ಯಾಣ ಮಂದಿರದಲ್ಲಿ ಆಯೋಜಿಸಿದ್ದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಶ್ರಮಿಕ ತಾತ್ಕಾಲಿಕ ವಸತಿ ಸಮುಚ್ಚಯ ಭವನ ಲೋಕಾರ್ಪಣೆ ಹಾಗೂ ಶಿವಮೊಗ್ಗ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಮಿಕರ ಕಲ್ಯಾಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಮಹತ್ವಪೂರ್ಣವಾದ ಬಿಲ್‌ಗಳನ್ನು ಪಾಸ್ ಮಾಡಿದೆ. ಅಮೇಜಾನ್, ಸ್ವಿಗ್ಗಿ, ಝೊಮ್ಯಾಟೊ ಬ್ಲಿಂಕ್‌ಇಟ್‌ಗಳಲ್ಲಿ ಕೆಲಸ ಮಾಡುವ 5 ಲಕ್ಷಕ್ಕೂ ಹೆಚ್ಚು ಗಿಗ್ ಕಾರ್ಮಿಕರು ರಾಜ್ಯದಲ್ಲಿ ಇದ್ದಾರೆ. ಅವರಿಗಾಗಿಯೇ ಪ್ರಪ್ರಥಮವಾಗಿ ಕರ್ನಾಟಕದಲ್ಲಿ ಸಮರ್ಪಕವಾದ ಗಿಗ್ ಬಿಲ್ ಪಾಸ್ ಆಗಿದೆ. ಸಾಗಾಣಿಕೆ ದರದ ಮೇಲೆ 1 ರಿಂದ 5% ಹಣ ಮತ್ತು ಸರ್ಕಾರ ನೀಡುವ ಹಣದಿಂದ ಅವರಿಗೆ ಅನುಕೂಲ ಮಾಡಲಾಗುತ್ತಿದೆ.

ಎರಡನೆಯದು ಸಹನಟರು, ಟಿಕೆಟ್ ನೀಡುವವರು, ತಂತ್ರಜ್ಞರು, ಪೌರಾಣಿಕ ನಾಟಕ ನಟರು ಸೇರಿದಂತೆ ಹಿನ್ನೆಲೆಯಲ್ಲಿ ಕೆಲಸ ಮಾಡುವ ಕೆಲಸಗಾರಗಾಗಿ ಸಿನಿ ಬಿಲ್ ಪಾಸ್ ಮಾಡಿದ್ದು, ಶೇ. 1 ರಿಂದ 2 ಸೆಸ್ ಮತ್ತು ಸರ್ಕಾರದ ಹಣ ಸೇರಿಸಿ ಅನುಕೂಲ ಮಾಡಲಾಗಿದೆ. ಹಾಗೂ ಕಮರ್ಷಿಯಲ್ ಡ್ರೈವರ್ ಕ್ಲೀನರ್, ಮೆಕ್ಯಾನಿಕ್ ಇತರೆ ಕಾರ್ಮಿಕರ ಸಾರಿಗೆ ಬಿಲ್ ಪಾಸ್ ಮಾಡಿದ್ದು, ಅಪಘಾತ, ಮರಣ ಅಥವಾ ತೊಂದರೆಯಾದಲ್ಲಿ ರೂ. 5 ಲಕ್ಷ ನೀಡುವ ಯೋಜನೆ ಜಾರಿಗೆ ತರಲಾಗಿದೆ. ಪ್ರತಿ ತಾಸಿಗೆ 20 ಸಾವಿರ ಮರಣ ಸಂಭವಿಸುತ್ತಿದ್ದು ಪ್ರತಿ ದಿನ 480 ಜನ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ದುಡಿಯುವ ವರ್ಗವೇ ಇದಕ್ಕೆ ಹೆಚ್ಚು ಬಲಿಯಾಗುತ್ತಿರುವ ಕಾರಣ ದೇಶದ ಜಿಡಿಪಿಗೆ ಶೇ.3 ನಷ್ಟವಾಗುತ್ತಿದೆ. ಸಭೆಗಳಲ್ಲಿ ಈ ಕುರಿತು ಜಿಲ್ಲಾಧಿಕಾರಿಗಳು ಅಪಘಾತ ಆಗದಂತೆ ಅರಿವು ಮೂಡಿಸಿ, ಹೆಲ್ಮೆಟ್ ಕಡ್ಡಾಯಗೊಳಿಸಬೇಕು ಎಂದರು.

20 ಜನರಿಗಿಂತ ಹೆಚ್ಚು ಕಾರ್ಮಿಕರು ಕೆಲಸ ಮಾಡುವೆಡೆ ಮಾಲೀಕರು 5 ವರ್ಷ ಕೆಲಸ ಮಾಡಿದ ಕಾರ್ಮಿಕರಿಗೆ ಕಡ್ಡಾಯವಾಗಿ ಗ್ರಾಚುಟಿ ಪಾವತಿಸಬೇಕು. ಈ ರೀತಿಯ 6 ಸಾವಿರ ಕಂಪೆನಿಗಳು ಇಲಾಖೆಯಡಿ ನೋಂದಣಿಯಾಗಿದ್ದು, ಅಧಿಕಾರಿಗಳು ಗ್ರಾಚುಟಿ ಪಾವತಿ ಬಗ್ಗೆ ಪರಿಶೀಲಿಸಬೇಕು ಎಂದು ಸೂಚಿಸಿದರು.

ಎಸ್‌ಸಿ/ ಎಸ್‌ಟಿ ಯವರಿಗೆ ಕೆಲಸ ನೀಡುವ ಖಾಸಗಿ ಸಂಸ್ಥೆ/ಕಂಪೆನಿಗೆ ಕಾರ್ಮಿಕ 'ಇಲಾಖೆಯಿಂದ ಅವರಿಗೆ ಪಾವತಿಸಲು ಶೇ. 50 ಹಣ ನೀಡುವ ದೇಶದಲ್ಲೇ ಪ್ರಪ್ರಥಮ ಯೋಜನೆ 'ಆಶಾದೀಪ' ಕಾರ್ಮಿಕರ ಪಾಲಿಗೆ ಆಶಾದೀಪವಾಗಿದೆ. ಇದೇ ಮೊದಲ ಬಾರಿಗೆ ಇಲಾಖೆಯು 91 ಸಣ್ಣ ಸಣ್ಣ ಕೆಲಸ ಮಾಡುವ ಸಮುದಾಯಗಳನ್ನು ಗುರುತಿಸಿ ಸ್ಮಾರ್ಟ್ ಕಾರ್ಡ್ ನೀಡುತ್ತಿದೆ. ಅಸಂಘಟಿತ ವರ್ಗದ ಕಾರ್ಮಿಕರ ಸಾಮಾಜಿಕ ಭದ್ರತಾ ಯೋಜನೆಗಳಿಗಾಗಿ ಡೀಸೆಲ್, ಪೆಟ್ರೋಲ್ ನಿಂದ 50 ಪೈಸಾ ದಿಂದ 1 ರೂ. ಸೆಸ್ ನೀಡಿದಲ್ಲಿ ಅನುಕೂಲವಾಗುತ್ತದೆ ಎಂದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ನಡೆಯುತ್ತಿವೆ. ಸರ್ಕಾರ ರೂ. 56 ಸಾವಿರ ಕೋಟಿಯಿಂದ 60 ಸಾವಿರ ಕೋಟಿವರೆಗೆ ಇದಕ್ಕಾಗಿ ಪ್ರತಿ ವರ್ಷ ವೆಚ್ಚ ಮಾಡುತ್ತಿದೆ. 83 ಸಾವಿರ ಕೋಟಿ ಅಭಿವೃದ್ಧಿಗಾಗಿ ನೀಡಿದೆ. ಶಕ್ತಿ ಯೋಜನೆಯಿಂದ ಹೆಣ್ಣು ಮಕ್ಕಳ ಓಡಾಟ ಹೆಚ್ಚಿದೆ. ಶೇ.40 ಹೆಣ್ಣು ಮಕ್ಕಳ ಪ್ರಯಾಣ ಹೆಚ್ಚಿದೆ. ಗ್ಯಾರಂಟಿ ಯೋಜನೆಗಳಡಿ ಬಡವರಿಗೆ ನೀಡುತ್ತಿರುವುದು ಉಳಿತಾಯಕ್ಕಾಗಿ ಅಲ್ಲ. ಆ ಹಣ ಸಂಪೂರ್ಣವಾಗಿ ಮತ್ತೆ ಮಾರುಕಟ್ಟೆಗೆ ವಾಪಸ್ ಬರುತ್ತಿರುವ ಕಾರಣ ರಾಜ್ಯದ ಜಿಡಿಪಿ ಭಾರತದಲ್ಲಿ ನಂ.1 ಕ್ಕೇರಿದೆ.

ಶಾಸಕರಾದ ಎಸ್ ಎನ್ ಚನ್ನಬಸಪ್ಪ ಮಾತನಾಡಿ, ರಾಜ್ಯದಲ್ಲಿ ಸದಾ ಕಾರ್ಮಿಕರ ಏಳ್ಗೆಗಾಗಿ ಶ್ರಮ ವಹಿಸುತ್ತಿರುವ ಕಾರ್ಮಿಕ ಸಚಿವರಿಗೆ ಅಭಿನಂದನೆ ತಿಳಿಸಿದ ಅವರು, ಜಿಲ್ಲೆಯಲ್ಲಿ ಕಾರ್ಮಿಕರ ಭವನ ನಿರ್ಮಿಸಲು ಸಹಕರಿಬೇಕು. ಅಡುಗೆ ಬಡಿಸುವವರನ್ನೂ ಅಸಂಘಟಿತ ಕಾರ್ಮಿಕರ ಪಟ್ಟಿಗೆ ಸೇರಿಸಬೇಕು ಹಾಗೂ ಆಶಾ ಕಾರ್ಯಕರ್ತೆಯರ ಗೌರವ ಧನ ಹೆಚ್ಚಿಸಲು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಹೆಚ್ಚಿಸಬೇಕೆಂದು ಮನವಿ ಮಾಡಿದರು.

ಕಾರ್ಮಿಕ ಇಲಾಖೆ ಜಂಟಿ ನಿರ್ದೇಶಕರಾದ ಡಾ.ಎಸ್.ಬಿ ರವಿಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಚಿವರು ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್‌ಕಾರ್ಡ್ ಮತ್ತು ಮೃತಪಟ್ಟವರ ಅವಲಂಬಿತರಿಗೆ ಚೆಕ್ ವಿತರಿಸಿದರು.

ಶಾಸಕರಾದ ಶಾರದಾ ಪೂರ್ಯಾನಾಯ್ಕ, ವಿಧಾನ ಪರಿಷತ್ ಶಾಸಕರಾದ ಡಿ.ಎಸ್.ಅರುಣ್, ಡಾ.ಧನಂಜಯ ಸರ್ಜಿ, ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಸ್.ರವಿಕುಮಾರ್, ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ, ಸೂಡಾ ಅಧ್ಯಕ್ಷ ಸುಂದರೇಶ್, ಕಾರ್ಮಿಕ ಆಯುಕ್ತರಾದ ಡಾ.ಗೋಪಾಲಕೃಷ್ಣ, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಕಾರ್ಯದರ್ಶಿಗಳಾದ ಭಾರತಿ, ಜಿ.ಪಂ.ಸಿಇಓ ಹೇಮಂತ್. ಕಾರ್ಮಿಕ ಕಲ್ಯಾಣ ಮಂಡಳಿ ಸದಸ್ಯರು, ಜಿಲ್ಲಾ ಕಾರ್ಮಿಕ ಅಧಿಕಾರಿ, ಮುಖಂಡರು, ಕಾರ್ಮಿಕರು, ಸಾರ್ವಜನಿಕರು ಹಾಜರಿದ್ದರು.

### ಸ್ವಪ್ನಗಳನ್ನು ಸಾಕಾರಗೊಳಿಸಲು ಇಂದೇ ಪ್ರಾರಂಭಿಸಿ”

## ವೆಂಕಟೇಶ್ ಬಾಬು ಅವರಿಂದ ಉತ್ಸಾಹಭರಿತ ಸಂದೇಶ



**ದಾವಣಗೆರೆ** : ನಗರದಲ್ಲಿರುವ ವಿನ್ನರ್ಸ್ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗಾಗಿ ಒರಿಯೆಂಟೇಶನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, “ಯಶಸ್ಸು ನಿಮ್ಮ ಕೈಯಲ್ಲಿದೆ” ಎಂಬ ವಿಷಯದ ಕುರಿತು ಪ್ರೇರಣಾತ್ಮಕ ಭಾಷಣಕಾರಾದ ಡಾ.ವೆಂಕಟೇಶ್ ಬಾಬು ಅವರು ಅತಿಥಿಯಾಗಿ ಭಾಗವಹಿಸಿ ಪ್ರೇರಣಾತ್ಮಕ ಉಪನ್ಯಾಸ ನೀಡಿದರು.

ಅವರು, ಮಾತನಾಡುತ್ತಾ “ಯಶಸ್ಸು ಹೊರಗಿನಿಂದ ಬರುವವದಲ್ಲ, ಅದು ನಿಮ್ಮೊಳಗೇ ಇರುತ್ತದೆ. ಅದನ್ನು ಹೊರತೆಗೆದುಕೊಳ್ಳುವುದು ನಿಮ್ಮ ಪ್ರಯತ್ನದಿಂದ ಸಾಧ್ಯ. ಸ್ಪಷ್ಟವಾದ ಗುರಿ, ಸಮಯದ ಮಹತ್ವವನ್ನು ಅರಿತು, ಪ್ರತಿ ಕ್ಷಣವೂ ಸದುಪಯೋಗಪಡಿಸಿಕೊಂಡು, ಗುರಿಯತ್ತ ನಿಷ್ಠೆಯಿಂದ ನಡೆಯುವವರು ಎಲ್ಲರಿಗೂ ಮಾದರಿಯಾಗುತ್ತಾರೆ. ಜೀವನದಲ್ಲಿ ಅಡ್ಡಿಗಳು ಅನಿವಾರ್ಯ, ಆದರೆ ಅದನ್ನು ಜೇನಿನಂತೆ ಸಿಹಿ ಮಾಡುವ ಶಕ್ತಿಯು ನಿಮ್ಮಲ್ಲಿ ಇದೆ. ಸಾಧನೆಯ ಮೊದಲು ನಂಬಿಕೆ ಬರಬೇಕು. ನಿಮ್ಮ ಮೇಲೆ ನಂಬಿಕೆ ಇಟ್ಟಾಗ, ಲೋಕವೂ ನಿಮ್ಮ ಬೆಂಬಲಿಗವಾಗುತ್ತದೆ” ಎಂದು ವಿದ್ಯಾರ್ಥಿಗಳಿಗೆ ಉತ್ಸಾಹ ತುಂಬಿದ ಮಾತುಗಳನ್ನು ಹೇಳಿದರು.

ಕಾರ್ಯಕ್ರಮದ ಆರಂಭದಲ್ಲಿ ಕಾಲೇಜಿನ ನಿರ್ದೇಶಕರಾದ ಡಾ ಶಿವರಾಜ ಕಬ್ಬೂರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕಾಲೇಜಿನ ಶೈಕ್ಷಣಿಕ ದಿಸೆಯನ್ನು ವಿವರಿಸಿದರು. ವಿದ್ಯಾರ್ಥಿಗಳು ಒಳ್ಳೆ ಉದ್ದೇಶದಿಂದ ಕಾಲೇಜಿನಲ್ಲಿ ನಡೆಯುವ ಪಾಠ ಪ್ರವಚನಗಳಲ್ಲಿ ತಲ್ಲಿನರಾದಾಗ ಏನಾದರೂ ಸಾಧಿಸಲು ಸಾಧ್ಯ ಎಂದು ಹೇಳಿದರು

ಪ್ರಾಂಶುಪಾಲರಾದ ಪ್ರೊ. ನಾಗರಾಜ್ ಅವರು ಅತಿಥಿಗಳನ್ನು ಸ್ವಾಗತಿಸಿ, ಕಾರ್ಯಕ್ರಮದ ನಿರೂಪಣೆಯನ್ನು ಕೈಗೊಂಡರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರು, ಸಿಬ್ಬಂದಿ ವರ್ಗ ಹಾಗೂ ನೂತನ ವಿದ್ಯಾರ್ಥಿಗಳು ಭಾಗಿ ಆಗುವ ಮೂಲಕ ಯಶಸ್ವಿಯಾಗಿ ನೆರವೇರಿಸಿದರು. ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಗುರಿಯ ಅರಿವು ಮತ್ತು ಶಿಸ್ತಿನ ಜೀವನಶೈಲಿಯ ಪ್ರೇರಣೆಯು ಈ ಉಪನ್ಯಾಸದ ಮೂಲಕ ಮೂಡಿಬಂದಿತು.

### ಶ್ರಾವಣ ಸಂಜೆಯಲ್ಲಿ ಬಸವಮರುಳಸಿದ್ದ ಸ್ವಾಮೀಜಿ ಅಭಿಮತ

## ವ್ಯಕ್ತಿತ್ವ ಹಿಗ್ಗಿಸಿಕೊಂಡರೆ ಮನೆಗಳು ಮಹಾಮನೆ

**ಚಿಕ್ಕಮಗಳೂರು :** ವ್ಯಕ್ತಿತ್ವ ಹಿಗ್ಗಿಸಿಕೊಂಡರೆ ಮನೆ ಮಹಾಮನೆಯಾಗುತ್ತದೆ ಎಂದು ಬಸವತತ್ತ್ವಪೀಠದ ಅಧ್ಯಕ್ಷ ಶ್ರೀಡಾ.ಬಸವಮರುಳಸಿದ್ದ ಸ್ವಾಮೀಜಿ ನುಡಿದರು.



ಮಾಧ್ಯಮ ಸಂಸ್ಕೃತಿ ಪ್ರತಿಷ್ಠಾನ, ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಹಾಗೂ ಐಸಿರಿ ಫೌಂಡೇಶನ್ ಸಹಯೋಗದೊಂದಿಗೆ ಜುಲೈ26 ರಿಂದ ಆಗಸ್ಟ್24ರ ವರೆಗೆ ಆಯೋಜಿಸಿರುವ 'ಅಂಗಳದೆಡೆಗೆ ಮಂಗಳ ನುಡಿ-ನಡಿಗೆ' 'ಶ್ರಾವಣ ಮಾಸದ ಪ್ರವಚನ ಮಾಲಿಕೆ'ಯ ಅಂಗವಾಗಿ ಶುಕ್ರವಾರ ಸಂಜೆ ಕಲ್ಯಾಣ ನಗರದ ಜಗದೀಶಬಾಬು ಮನೆಯಂಗಳದಲ್ಲಿ 'ಮನೆ-ಮಹಾಮನೆ' ಕುರಿತು ಅವರು ಉಪನ್ಯಾಸ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಹಿರಿಯರನ್ನು ಪ್ರೀತಿ-ವಿಶ್ವಾಸದಿಂದ ನೋಡಿಕೊಂಡು ಹೋಗುವ ದೊಡ್ಡ ಜವಾಬ್ದಾರಿ ನಮ್ಮ ಸಮಾಜದ ಮೇಲಿದೆ. ಅಪ್ಪ-ಅಮ್ಮನನ್ನು ಚೆನ್ನಾಗಿ ನೋಡಿಕೊಳ್ಳುವ ಸಂಸ್ಕಾರ-ಸಂಸ್ಕೃತಿ ನಮ್ಮದಾಗಬೇಕು. ಮಕ್ಕಳು ನಮ್ಮನ್ನೆ ಅನುಕರಿಸುತ್ತವೆ ಎಂಬ ಪ್ರಜ್ಞೆ ಅಗತ್ಯ. ಕೌಟುಂಬಿಕ ಮೌಲ್ಯಗಳು ಪಾಲನೆಯಾಗಬೇಕೆಂದವರು ನುಡಿದರು.

ಅನುಕೂಲ ಜಾಸ್ತಿಯಾಗಿ ಬಾಂಧವ್ಯಗಳು ಸಡಿಲವಾಗುತ್ತಿವೆ. ಭಯ ಸಂಶಯದ ತಲ್ಲಣಗಳ ಕಂದಕ ಎದೆಗಳ ನಡುವಿನ ಸೇತುವೆಯನ್ನು ಮುರಿದಿದೆ ಎಂಬ ಜಿ.ಎಸ್.ಶಿವರುದ್ರಪ್ಪರ ಕಾವ್ಯ ಉಲ್ಲೇಖಿಸಿದ ಸ್ವಾಮೀಜಿ, ಸಣ್ಣತನದಿಂದಾಗಿ ಮಾನವೀಯ ಗುಣಗಳು ಜಾಳಾಗುತ್ತಿವೆ ಎಂದರು.

ಅಪನಂಬಿಕೆ ಮನುಷ್ಯರಲ್ಲಿ ಮಾತ್ರ ಇರುವುದೇ ಹೊರತು ಬೇರ್‍ಯಾವುದೇ ಜೀವಿಗಳಲ್ಲಿ ಇರುವುದಿಲ್ಲ. ಮನೆಯಲ್ಲಿ ಪ್ರೀತಿ, ವಿಶ್ವಾಸ, ನಂಬಿಕೆ, ತ್ಯಾಗ ಇದ್ದರೆ ಮಹಾಮನೆಯೆನಿಸಿಕೊಳ್ಳುತ್ತದೆ. ಪರಸ್ಪರ ಬಾಂಧವ್ಯಗಳು ಬೆಸೆದಾಗ ಕಷ್ಟಸುಖಗಳನ್ನು ಹಂಚಿಕೊಳ್ಳುವ ವಾತಾವರಣ ಸೃಷ್ಟಿಯಾಗಿ ಅನೇಕ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳು, ವೈಮನಸ್ಸು ದೂರಾಗುತ್ತದೆ ಎಂದ ಸ್ವಾಮೀಜಿ, ಇಂತಹ ಕಾರ್‍ಯಕ್ರಮಗಳು ಮನೆಯಂಗಳದಲ್ಲಿ ನಡೆದು ಮಹಾಮನೆಗೆ ಪೂರಕವಾಗುತ್ತಿವೆ ಎಂದರು.

ಶಾಸಕ ಎಚ್.ಡಿ.ತಮ್ಮಯ್ಯ ಕಾರ್‍ಯಕ್ರಮ ಉದ್ಘಾಟಿಸಿ ಮಾತನಾಡಿ ಊರು ಸಮಾಜ ಉದ್ಧಾರ ಎಂದರೆ ಕೇವಲ ಮನೆ,

ರಸ್ತೆ, ಕಟ್ಟಡಗಳಷ್ಟೇ ಅಲ್ಲ ಅಲ್ಲಿರುವ ಜನರ ಸಂಸ್ಕಾರ ಸಾಹಿತ್ಯ-ಧರ್ಮ-ರಾಷ್ಟ್ರಾಭಿಮಾನ ಪ್ರಗತಿಯಕೊಡುವುದರಲ್ಲಿ ಸದ್ಭಾವನೆ ಇದ್ದರೆ ಸ್ವೀಕರಿಸುವ ಸಮೂಹ ಸಮಾಜದಲ್ಲಿ ದೊಡ್ಡದಿದೆ ಎಂದರು. ಸ್ನೇಹಿತರನ್ನು ಕೂಡಿ ಶತ್ರುಗಳನ್ನು ಕಳೆದಾಗ ಮನೆಗಳು ಮಹಾಮನೆಗಳಾಗುತ್ತವೆ ಎಂದ ಚಟ್ನಳ್ಳಿಮಹೇಶ್, 'ಬಾಳು ತೆಂಗಿನಕಾಯಿ, ಹೋಳು ಪತಿ-ಪತ್ನಿ, ಇಡಿ ಇರಲು ಕೆಡದಿರದು, ಬಿರುಕುಬಿಡೆ ತಡೆಯಾಕೆ ಕೆಡಲು ಒಂದೇದಿನ' ಎಂಬ ಕವಿವಾಣಿಯನ್ನು ಉಲ್ಲೇಖಿಸಿದರು.

ಪ್ರಾಯೋಜಕ ಜಗದೀಶಬಾಬು ಸ್ವಾಗತಿಸಿ, ಐಸಿರಿ ಫೌಂಡೇಶನ್ ಅಧ್ಯಕ್ಷ ರೋಹನಭಾರ್ಗವಪುರಿ ಪ್ರಾಸ್ತಾವಿಸಿ, ಮಾ.ಸಂ.ಪ್ರ.ಅಧ್ಯಕ್ಷ ಪ್ರಭುಲಿಂಗಶಾಸ್ತ್ರಿ ವಂದಿಸಿದರು. ಶಿಕ್ಷಕ ಪರಮೇಶ್ವಪ್ಪ ನಿರೂಪಿಸಿದರು. ಬೇಲೂರು ಚಂದನ್‌ರ ಗಾಯನ ಗಮನಸೆಳೆಯಿತು.

### ಗೃಹ ಆರೋಗ್ಯ ಯೋಜನೆ ಕಾರ್ಯಾಗಾರಕ್ಕೆ ಸಚಿವ ಡಿ. ಸುಧಾಕರ್ ಚಾಲನೆ

## ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಗುರುತಿಸುವಲ್ಲಿ ಆಶಾ ಕಾರ್ಯಕರ್ತೆಯರ ಪಾತ್ರ ಮಹತ್ವದ್ದು



**ಚಿತ್ರದುರ್ಗ:** ರಾಜ್ಯ ಸರ್ಕಾರ ಜನರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಜಾರಿಗೊಳಿಸಿರುವ “ಗೃಹ ಆರೋಗ್ಯ” ಯೋಜನೆಯು ಮಹತ್ವಪೂರ್ಣವಾಗಿದ್ದು, ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಗುರುತಿಸಿ, ಶೀಘ್ರ ಚಿಕಿತ್ಸೆ ಕೊಡಿಸುವಲ್ಲಿ ಆಶಾ ಕಾರ್ಯಕರ್ತೆಯರು ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಹೇಳಿದರು.

ಇಂತಹ ಸ್ಥಿತಿಯಿಂದ ಜನಸಾಮಾನ್ಯರನ್ನು ಪಾರುಮಾಡುವ ಸಲುವಾಗಿ ಸರ್ಕಾರ ಉತ್ತಮ ಯೋಜನೆಯನ್ನು ಜಾರಿಗೊಳಿಸಿದ್ದು, ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ ವಿವಿಧ ರೋಗಗಳನ್ನು ಗುರುತಿಸುವಂತಹ “ಗೃಹ ಆರೋಗ್ಯ” ಯೋಜನೆಯನ್ನು ಕಳೆದ ವರ್ಷ ಪ್ರಾಯೋಗಿಕವಾಗಿ ಕೋಲಾರ ಜಿಲ್ಲೆಯಲ್ಲಿ ಜಾರಿಗೊಳಿಸಲಾಗಿತ್ತು. ಆ ಸಂದರ್ಭದಲ್ಲಿ 05 ಬಗೆಯ ರೋಗಗಳನ್ನು ಪತ್ತೆಹಚ್ಚಲು ತರಬೇತಿ ನೀಡಿ, ಅನುಷ್ಠಾನಗೊಳಿಸಲಾಗಿತ್ತು. ಈ ಯೋಜನೆ ಯಶಸ್ವಿಗೊಂಡಿದ್ದರಿಂದ, ಇದೀಗ ನಮ್ಮ ಸರ್ಕಾರ ಇಡೀ ರಾಜ್ಯಕ್ಕೆ ಗೃಹ ಆರೋಗ್ಯ ಯೋಜನೆಯನ್ನು ವಿಸ್ತರಿಸಿದ್ದು, ಇದರ ಜೊತೆಗೆ ಮಧುಮೇಹ, ರಕ್ತದೊತ್ತಡ, ವಿವಿಧ ಬಗೆಯ ಕ್ಯಾನ್ಸರ್ ಸೇರಿದಂತೆ 14 ಬಗೆಯ ರೋಗ ಪತ್ತೆಹಚ್ಚುವ ಕಾರ್ಯಕ್ರಮ ಜಾರಿಗೊಳಿಸಿದೆ. ಜನರಲ್ಲಿ ಸುಪ್ತವಾಗಿರುವ ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಗುರುತಿಸಿದರೆ, ತ್ವರಿತ ಚಿಕಿತ್ಸೆ ನೀಡಿ, ಗುಣಮುಖರನ್ನಾಗಿಸಲು ಸಾಧ್ಯವಿದೆ. ಜಿಲ್ಲೆಯಲ್ಲಿ ಈ ಕಾರ್ಯಕ್ರಮ ಅನುಷ್ಠಾನಗೊಳಿಸುವಲ್ಲಿ ಆಶಾ ಕಾರ್ಯಕರ್ತೆಯರ ಜವಾಬ್ದಾರಿ ಹೆಚ್ಚು ಇದೆ. ಆಶಾ ಕಾರ್ಯಕತೆರ್ಯರು ಮನೆ ಮನೆ ಭೇಟಿ ನೀಡಿ, ಆರೋಗ್ಯ ಇಲಾಖೆ ನಿಗದಿಪಡಿಸಿರುವ ಪ್ರಶ್ನಾವಳಿಗಳು, ರೋಗ ಲಕ್ಷಣಗಳ ಮೂಲಕ ರೋಗಗಳನ್ನು ಪತ್ತೆ ಹಚ್ಚಿ, ಹೆಚ್ಚಿನ ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲಿಸಲು ನೆರವಾಗುವಂತೆ ಸಚಿವರು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಿಹೆಚ್‌ಡಿ ಡಾ. ರೇಣುಪ್ರಸಾದ್, ಗೃಹ ಆರೋಗ್ಯ ಯೋಜನೆಯಡಿ ಆಶಾ ಕಾರ್ಯಕರ್ತೆಯರು ಮನೆ ಮನೆ ಭೇಟಿ ನೀಡಿ, 30 ವರ್ಷಕ್ಕೂ ಮೇಲ್ಪಟ್ಟವರಲ್ಲಿ ಅಧಿಕ ರಕ್ತದೊತ್ತಡ, ಮಧುಮೇಹ, ಮಧುಮೇಹ ಸಂಬಂಧಿತ ಪಾದದ ಸಮಸ್ಯೆ,

ಕಣ್ಣಿನ ಸಮಸ್ಯೆ, ಮೂತ್ರಪಿಂಡ ಕಾಯಿಲೆ, ಲಿವರ್, ಯಕೃತ್ತಿನ ಕಾಯಿಲೆ, ಶ್ವಾಸಕೋಶ ಸಂಬಂಧಿತ ಕಾಯಿಲೆ, ನಿದ್ರೆಯಲ್ಲಿ ಉಸಿರುಗಟ್ಟುವಿಕೆ. ಬಾಯಿ, ಸ್ತನ, ಗರ್ಭ ಕಂಠದ ಕ್ಯಾನ್ಸರ್, ರಕ್ತಹೀನತೆ, ಮಾನಸಿಕ ಕಾಯಿಲೆ, ನರವೈಜ್ಞಾನಿಕ ಕಾಯಿಲೆ ಸೇರಿದಂತೆ ಒಟ್ಟು 14 ಬಗೆಯ ರೋಗಗಳನ್ನು ಪತ್ತೆಹಚ್ಚುವ ಕಾರ್ಯ ಮಾಡಲಿದ್ದಾರೆ. ಜಿಲ್ಲೆಯಲ್ಲಿ 30 ವರ್ಷ ಮೇಲ್ಪಟ್ಟ ಸುಮಾರು 6.59 ಲಕ್ಷ ಜನರ ಆರೋಗ್ಯ ತಪಾಸಣೆ ಮಾಡುವ ಗುರಿ ಹೊಂದಲಾಗಿದ್ದು,

ರಾಜ್ಯದಲ್ಲಿ ಶೇ. 25 ರಷ್ಟು ಜನರಲ್ಲಿ ರಕ್ತದೊತ್ತಡ, ಶೇ. 14 ರಷ್ಟು ಜನರಲ್ಲಿ ಮಧುಮೇಹ ಇರುವುದು ಅಂಕಿ ಅಂಶಗಳಿಂದ ತಿಳಿದುಬಂದಿದೆ. ಜಿಲ್ಲೆಯಲ್ಲಿ ರೋಗಗಳ ಪತ್ತೆಗಾಗಿ ಆಶಾ ಕಾರ್ಯಕರ್ತೆಯರಿಗೆ ಸೂಕ್ತ ತರಬೇತಿ ನೀಡಲಾಗುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆಯರಿಗಾಗಿ ಸಿದ್ಧಪಡಿಸಲಾಗಿರುವ ಗೃಹ ಆರೋಗ್ಯ ಯೋಜನೆಯ ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್ ಪೀರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಆರ್. ಶಿವಣ್ಣ, ಜಿ.ಪಂ. ಸಿಇಓ ಡಾ. ಎಸ್. ಆಕಾಶ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಡಿ.ಎನ್.

ಮೈಲಾರಪ್ಪ, ಜಿ.ಪಂ. ಉಪಕಾರ್ಯದರ್ಶಿ ರಂಗಸ್ವಾಮಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕಂಬಾಳಿಮಠ ಸೇರಿದಂತೆ ಆರೋಗ್ಯ ಇಲಾಖೆಯ ಅನುಷ್ಠಾನ ಅಧಿಕಾರಿಗಳು ಉಪಸ್ಥಿತರಿದ್ದರು. ಆಶಾ ಕಾರ್ಯಕರ್ತೆಯರು, ಆರೋಗ್ಯ ಕೇಂದ್ರದ ಸಹಾಯಕಿಯರು ಪಾಲ್ಗೊಂಡು ಗೃಹ ಆರೋಗ್ಯ ಯೋಜನೆ ಕಾರ್ಯಾಗಾರದಡಿ ತರಬೇತಿ ಪಡೆದುಕೊಂಡರು.

## ಪೂರ್ವಭಾವಿ ಸಭೆ

**ದಾವಣಗೆರೆ:** ರಾಜ್ಯಾದ್ಯಂತ ಸೆ.15ರಂದು ನಡೆಯಲಿರುವ ಬಸವ ಸಂಸ್ಕೃತಿ ಅಭಿಯಾನ'ದ ಅಂಗವಾಗಿ ದಾವಣಗೆರೆಯಲ್ಲಿ ನಡೆಯುವ ಕಾರ್ಯಕ್ರಮದ ಕುರಿತು ಆ.5ರಂದು ಬೆಳಿಗ್ಗೆ 11:30ಕ್ಕೆ ಪೂರ್ವಭಾವಿ ಸಭೆಯನ್ನು ಇಲ್ಲಿನ ಶಿವಯೋಗಿ ಮಂದಿರದಲ್ಲಿ ಆಯೋಜಿಸಲಾಗಿದೆ.
ಸಾಣೆಹಳ್ಳಿಯ ಡಾ.ಪಂಡಿತಾರಾಧ್ಯ ಶ್ರೀಗಳ, ವಿರಕ್ತಮಠದ ಶ್ರೀ ಬಸವಪ್ರಭು ಸ್ವಾಮೀಜಿ ಹಾಗೂ ಪಾಂಡೋಮಟ್ಟಿಯ ವಿರಕ್ತಮಠದ ಡಾ. ಗುರುಬಸವ ಸ್ವಾಮೀಜಿ ಸಾನಿಧ್ಯದಲ್ಲಿ ನಡೆಯುವ ಪೂರ್ವಭಾವಿ ಸಭೆಯಲ್ಲಿ ಅಭಿಯಾನದ ಅಧ್ಯಕ್ಷ, ಉದ್ಯಮಿ ಅಣಬೇರು ರಾಜಣ್ಣ ಅಧ್ಯಕ್ಷತೆ ವಹಿಸಲಿದ್ದಾರೆ. ಬಸವತತ್ವ ಅನುಯಾಯಿಗಳು, ಬಸವಪರ ಸಂಘಟನೆಯ ಪದಾಧಿಕಾರಿಗಳು ಸಭೆಯಲ್ಲಿ ಪಾಲ್ಗೊಳ್ಳಲು ತಿಳಿಸಲಾಗಿದೆ.

**ಮಾನ್ಯ ಗೌರವಾನ್ವಿತ ಪ್ರಧಾನ ಹಿರಿಯ. ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಮ್ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್ ನಂ . 399/2025**

**ಅರ್ಜಿದಾರರು:** ಶ್ರೀ ಜಿ. ರೇವಣಸಿದ್ದಪ್ಪ ತಂದೆ ಜಿ ತಮ್ಮಣ್ಣ ವಯಸ್ಸು 64 ವರ್ಷ. ವಾಸ: ಹೆಮ್ಮನಬೇತೂರು ಗ್ರಾಮ. ದಾವಣಗೆರೆ ತಾ ಮತ್ತು ಜಿಲ್ಲೆ

**-ವಿರುದ್ಧ-**

**ಎದುರುದಾರರು** : ತಹಶೀಲ್ದಾರರವರು ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**-:ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು:-**

ಈ ಮೇಲ್ಕಂಡ ಕೇಸಿನಲ್ಲಿ ಅರ್ಜಿದಾರರು ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರು ದಿನಾಂಕ: 05-10-1960 ರಂದು ದಾವಣಗೆರೆ ಜಿಲ್ಲೆ ದಾವಣಗೆರೆ ತಾಲ್ಲೂಕು, ಹೆಮ್ಮನಬೇತೂರು ಗ್ರಾಮದ ಸ್ವ-ಗೃಹದಲ್ಲಿ ಜನನ ಹೊಂದಿದ್ದು, ಇವರ ಜನನ ಪ್ರಮಾಣ ಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ನ್ಯಾಯಾಲಯದ ಮುಂದೆ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರಿಗೆ ಸಂಬಂದಪಟ್ಟ ಯಾರದಾದರು ತಕರಾರು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವುದಿದ್ದಲ್ಲಿ ದಿನಾಂಕ: 29/8/25. ರಂದು ಖುದ್ದು ಹಾಜರಾಗಿ ಆಕ್ಷೇಪಣೆಗಳನ್ನು ಸಲ್ಲಿಸತಕ್ಕದ್ದು.

ತಪ್ಪಿದ್ದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ: 23/7/25 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

**ಸಹಿ/-**
**ಅರ್ಜಿದಾರರ ಪರ ವಕೀಲರು**
**(ಬಿ.ಎಸ್. ನಾಗರಾಜ್)**

**ಸಹಿ/-**
**ಶಿರಸ್ತೇದಾರರು**
**ಮಾನ್ಯ ಸಿವಿಲ್ ನ್ಯಾಯಾಧೀಶರು (ಹಿ.ವಿ)**
**ಮತ್ತು ಸಿ.ಜೆ.ಎಮ್. ನ್ಯಾಯಾಲಯ ದಾವಣಗೆರೆ.**

# ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಗುರುತಿಸುವಲ್ಲಿ ಆಶಾ ಕಾರ್ಯಕರ್ತೆಯರ ಪಾತ್ರ ಮಹತ್ವದ್ದು : ಡಿ. ಸುಧಾಕರ್

**ಚಿತ್ರದುರ್ಗ :** ರಾಜ್ಯ ಸರ್ಕಾರ ಜನರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಜಾರಿಗೊಳಿಸಿರುವ "ಗೃಹ ಆರೋಗ್ಯ" ಯೋಜನೆಯು ಮಹತ್ವಪೂರ್ಣವಾಗಿದ್ದು, ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಗುರುತಿಸಿ, ಶೀಘ್ರ ಚಿಕಿತ್ಸೆ ಕೊಡಿಸುವಲ್ಲಿ ಆಶಾ ಕಾರ್ಯಕರ್ತೆಯರು ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ "ಗೃಹ ಆರೋಗ್ಯ" ಯೋಜನೆ ಕುರಿತಂತೆ ಆಶಾ ಕಾರ್ಯಕರ್ತೆಯರು ಮತ್ತು ಆರೋಗ್ಯ ಕೇಂದ್ರದ ಸಹಾಯಕಿಯರಿಗೆ ಏರ್ಪಡಿಸಿದ್ದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲ ಸಂಪತ್ತಿಗಿಂತಲೂ ಆರೋಗ್ಯ ಸಂಪತ್ತು ಶ್ರೇಷ್ಠ, ಒತ್ತಡದ ಜೀವನದಲ್ಲಿ ಜನರು ನೂರಾರು ಕಾಯಿಲೆಗಳ ನಡುವೆ ಬದುಕು ಸಾಗಿಸುತ್ತಿದ್ದಾರೆ. ಕಾಯಿಲೆಗಳು ಬಂದಿದ್ದರೂ, ಪ್ರಾಥಮಿಕ ಹಂತದಲ್ಲಿ ಗುರುತಿಸದೆ, ಮಾರಣಾಂತಿಕವಾದ ಬಳಿಕ ಚಿಕಿತ್ಸೆಗೆ ಪರದಾಡುವುದನ್ನು ಗಮನಿಸುತ್ತಿದ್ದೇವೆ. ಇಂತಹ ಸ್ಥಿತಿಯಿಂದ ಜನಸಾಮಾನ್ಯರನ್ನು ಪಾರುಮಾಡುವ ಸಲುವಾಗಿ ಸರ್ಕಾರ ಉತ್ತಮ ಯೋಜನೆಯನ್ನು ಜಾರಿಗೊಳಿಸಿದ್ದು, ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ ವಿವಿಧ ರೋಗಗಳನ್ನು ಗುರುತಿಸುವಂತಹ "ಗೃಹ ಆರೋಗ್ಯ" ಯೋಜನೆಯನ್ನು ಕಳೆದ ವರ್ಷ ಪ್ರಾಯೋಗಿಕವಾಗಿ ಕೋಲಾರ ಜಿಲ್ಲೆಯಲ್ಲಿ ಜಾರಿಗೊಳಿಸಲಾಗಿತ್ತು. ಆ ಸಂದರ್ಭದಲ್ಲಿ 05 ಬಗೆಯ ರೋಗಗಳನ್ನು ಪತ್ತೆಹಚ್ಚಲು ತರಬೇತಿ ನೀಡಿ, ಅನುಷ್ಠಾನಗೊಳಿಸಲಾಗಿತ್ತು. ಈ ಯೋಜನೆ ಯಶಸ್ವಿಗೊಂಡಿದ್ದರಿಂದ, ಇದೀಗ ನಮ್ಮ ಸರ್ಕಾರ ಇಡೀ ರಾಜ್ಯಕ್ಕೆ ಗೃಹ ಆರೋಗ್ಯ ಯೋಜನೆಯನ್ನು ವಿಸ್ತರಿಸಿದ್ದು, ಇದರ ಜೊತೆಗೆ ಮಧುಮೇಹ, ರಕ್ತದೊತ್ತಡ, ವಿವಿಧ ಬಗೆಯ ಕ್ಯಾನ್ಸರ್ ಸೇರಿದಂತೆ 14 ಬಗೆಯ ರೋಗ ಪತ್ತೆಹಚ್ಚುವ ಕಾರ್ಯಕ್ರಮ ಜಾರಿಗೊಳಿಸಿದೆ. ಜನರಲ್ಲಿ ಸುಪ್ತವಾಗಿರುವ ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಗುರುತಿಸಿದರೆ, ತ್ವರಿತ ಚಿಕಿತ್ಸೆ ನೀಡಿ, ಗುಣಮುಖರನ್ನಾಗಿಸಲು ಸಾಧ್ಯವಿದೆ. ಜಿಲ್ಲೆಯಲ್ಲಿ ಈ ಕಾರ್ಯಕ್ರಮ ಅನುಷ್ಠಾನಗೊಳಿಸುವಲ್ಲಿ ಆಶಾ ಕಾರ್ಯಕರ್ತೆಯರ ಜವಾಬ್ದಾರಿ ಹೆಚ್ಚು ಇದೆ. ಆಶಾ ಕಾರ್ಯಕರ್ತೆಯರು ಮನೆ



ಮನೆ ಭೇಟಿ ನೀಡಿ, ಆರೋಗ್ಯ ಇಲಾಖೆ ನಿಗದಿಪಡಿಸಿರುವ ಪ್ರಶ್ನಾವಳಿಗಳು, ರೋಗ ಲಕ್ಷಣಗಳ ಮೂಲಕ ರೋಗಗಳನ್ನು ಪತ್ತೆ ಹಚ್ಚಿ, ಹೆಚ್ಚಿನ ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲಿಸಲು ನೆರವಾಗುವಂತೆ ಸಚಿವರು ತಿಳಿಸಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್ ಅವರು ಮಾತನಾಡಿ, ಕಾಯಿಲೆಯನ್ನು ಆರಂಭಕ್ಕೂ ಮುನ್ನ ಪ್ರಾಥಮಿಕವಾಗಿ ಗುರುತಿಸಿ, ಗುಣಪಡಿಸುವುದು ಮಹತ್ವದ್ದಾಗಿದೆ. ಕಾಯಿಲೆಗಳು ಸುಪ್ತವಾಗಿದ್ದು, ಮನುಷ್ಯನ ಜೀವಕ್ಕೆ ಕಂಟಕವಾಗುವ ಅನೇಕ ನಿದರ್ಶನಗಳಿವೆ. ಗ್ರಾಮಗಳಲ್ಲಿ ಆರೋಗ್ಯ ಸೇವೆ, ತಪಾಸಣೆ, ಚಿಕಿತ್ಸೆ ಪಡೆಯುವ ಬಗ್ಗೆ ಜಾಗೃತಿಯ ಕೊರತೆ ಇರುತ್ತದೆ. ಇಂತಹ ಸಂದರ್ಭದಲ್ಲಿ ಗೃಹ ಆರೋಗ್ಯ ಯೋಜನೆ ಜಾರಿಗೊಳಿಸಿದ್ದು, ಶ್ಲಾಘನೀಯವಾಗಿದೆ. ಆಶಾ ಕಾರ್ಯಕರ್ತೆಯರು ಮನೆ ಮನೆ ಭೇಟಿ ನೀಡಿ, ಆರೋಗ್ಯ ಇಲಾಖೆ ನಿಗದಿಪಡಿಸಿರುವ ಪ್ರಶ್ನಾವಳಿಗಳು, ಲಕ್ಷಣಗಳಿಂದ ರೋಗಗಳನ್ನು ಪ್ರಾಥಮಿಕ ಮಟ್ಟದಲ್ಲಿಯೇ ಗುರುತಿಸಿ, ತ್ವರಿತ ಚಿಕಿತ್ಸೆ ದೊರಕಿಸುವ ಮೂಲಕ ಗುಣಮುಖರನ್ನಾಗಿಸಲು ಸಾಧ್ಯವಾಗಲಿದೆ. ರಾಜ್ಯದಲ್ಲಿ ಗೃಹ ಆರೋಗ್ಯ ಯೋಜನೆ ಮೂಲಕ ಲಕ್ಷಾಂತರ ಜನರ ಜೀವ ಉಳಿಸುವ ಕಾರ್ಯ ಈ ಯೋಜನೆಯಿಂದ ಆಗಲಿದೆ. ಇದರ ಶ್ರೇಯಸ್ಸು ಸರ್ಕಾರಕ್ಕೆ ಮತ್ತು ಆಶಾ ಕಾರ್ಯಕರ್ತೆಯರಿಗೆ ಸಲ್ಲಲಿದೆ. ಈ ಯೋಜನೆಯನ್ನು ಕೇವಲ ಸಾಂಕೇತಿಕವಾಗಿ, ದಾಖಲೆಗಾಗಿ ಮಾತ್ರ ಮಾಡದೆ, ವೈದ್ಯರು ಆಶಾ ಕಾರ್ಯಕರ್ತೆಯರಿಗೆ ಸೂಕ್ತ ರೀತಿಯಲ್ಲಿ ತರಬೇತಿ ನೀಡಿ, ಸಂಪೂರ್ಣ ಸಹಕಾರ ನೀಡುವ ಮೂಲಕ ಯಶಸ್ವಿಗೊಳಿಸಬೇಕು ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್. ಶಿವಣ್ಣ ಮಾತನಾಡಿ, ಗೃಹ ಆರೋಗ್ಯ ಯೋಜನೆಯನ್ನು ಜಿಲ್ಲೆಯ ಎಲ್ಲ ಮನೆ ಮನೆಗಳಿಗೂ ತಲುಪಿಸಿ, ಯಶಸ್ವಿಗೊಳಿಸುವ ಕಾರ್ಯವನ್ನು ಆಶಾ ಕಾರ್ಯಕರ್ತೆಯರು ಪ್ರಾಮಾಣಿಕವಾಗಿ ಮಾಡಬೇಕು ಎಂದು ಮನವಿ ಮಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಿಹೆಚ್‌ಡಿ ಡಾ. ರೇಣುಪ್ರಸಾದ್, ಗೃಹ ಆರೋಗ್ಯ ಯೋಜನೆಯಡಿ ಆಶಾ ಕಾರ್ಯಕರ್ತೆಯರು ಮನೆ ಮನೆ ಭೇಟಿ ನೀಡಿ, 30 ವರ್ಷಕ್ಕೂ ಮೇಲ್ಪಟ್ಟವರಲ್ಲಿ ಅಧಿಕ ರಕ್ತದೊತ್ತಡ, ಮಧುಮೇಹ, ಮಧುಮೇಹ ಸಂಬಂಧಿತ ಪಾದದ ಸಮಸ್ಯೆ, ಕಣ್ಣಿನ ಸಮಸ್ಯೆ, ಮೂತ್ರಪಿಂಡ ಕಾಯಿಲೆ, ಲಿವರ್, ಯಕೃತ್ತಿನ ಕಾಯಿಲೆ, ಶ್ವಾಸಕೋಶ ಸಂಬಂಧಿತ ಕಾಯಿಲೆ, ನಿದ್ರೆಯಲ್ಲಿ ಉಸಿರುಗಟ್ಟುವಿಕೆ. ಬಾಯಿ, ಸ್ತನ, ಗರ್ಭ ಕಂಠದ ಕ್ಯಾನ್ಸರ್, ರಕ್ತಹೀನತೆ, ಮಾನಸಿಕ ಕಾಯಿಲೆ, ನರವೈಜ್ಞಾನಿಕ ಕಾಯಿಲೆ ಸೇರಿದಂತೆ ಒಟ್ಟು 14 ಬಗೆಯ ರೋಗಗಳನ್ನು ಪತ್ತೆಹಚ್ಚುವ ಕಾರ್ಯ ಮಾಡಲಿದ್ದಾರೆ. ಜಿಲ್ಲೆಯಲ್ಲಿ 30 ವರ್ಷ ಮೇಲ್ಪಟ್ಟ ಸುಮಾರು 6.59 ಲಕ್ಷ ಜನರ ಆರೋಗ್ಯ ತಪಾಸಣೆ ಮಾಡುವ ಗುರಿ ಹೊಂದಲಾಗಿದ್ದು, ರಾಜ್ಯದಲ್ಲಿ ಶೇ. 25 ರಷ್ಟು ಜನರಲ್ಲಿ ರಕ್ತದೊತ್ತಡ, ಶೇ. 14 ರಷ್ಟು ಜನರಲ್ಲಿ ಮಧುಮೇಹ ಇರುವುದು ಅಂಕಿ ಅಂಶಗಳಿಂದ ತಿಳಿದುಬಂದಿದೆ. ಜಿಲ್ಲೆಯಲ್ಲಿ ರೋಗಗಳ ಪತ್ತೆಗಾಗಿ ಆಶಾ ಕಾರ್ಯಕರ್ತೆಯರಿಗೆ ಸೂಕ್ತ ತರಬೇತಿ ನೀಡಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆಯರಿಗಾಗಿ ಸಿದ್ಧಪಡಿಸಲಾಗಿರುವ ಗೃಹ ಆರೋಗ್ಯ ಯೋಜನೆಯ ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಆರ್. ಶಿವಣ್ಣ, ಜಿ.ಪಂ. ಸಿಇಒ ಡಾ. ಎಸ್. ಆಕಾಶ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಡಿ. ಎನ್. ಮೈಲಾರಪ್ಪ, ಜಿ.ಪಂ. ಉಪಕಾರ್ಯದರ್ಶಿ ರಂಗಸ್ವಾಮಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕಂಬಾಳಿಮಠ ಸೇರಿದಂತೆ ಆರೋಗ್ಯ ಇಲಾಖೆಯ ಅನುಷ್ಠಾನ ಅಧಿಕಾರಿಗಳು ಉಪಸ್ಥಿತರಿದ್ದರು. ಆಶಾ ಕಾರ್ಯಕರ್ತೆಯರು, ಆರೋಗ್ಯ ಕೇಂದ್ರದ ಸಹಾಯಕಿಯರು ಪಾಲ್ಗೊಂಡು ಗೃಹ ಆರೋಗ್ಯ ಯೋಜನೆ ಕಾರ್ಯಗಾರದಡಿ ತರಬೇತಿ ಪಡೆದುಕೊಂಡರು.

### ಪ್ರಜ್ವಲ್ ರೇವಣ್ಣಗೆ ಜೀವಾವಧಿ ಶಿಕ್ಷೆ

# ಮೇಲ್ಮನವಿ ಸಲ್ಲಿಸಲು ಸಿದ್ಧತೆ

**ಬೆಂಗಳೂರು :** ಮನೆಗೆಲಸದ ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಆರೋಪದ ಪ್ರಕರಣದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರಿಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಜೀವಾವಧಿ ಶಿಕ್ಷೆ ಹಾಗೂ 11.25 ಲಕ್ಷ ರೂ. ದಂಡ ವಿಧಿಸಿ ತೀರ್ಪು ನೀಡಿರುವ ಹಿನ್ನೆಲೆಯಲ್ಲಿ ಮೇಲ್ಮನವಿ ಸಲ್ಲಿಸಲು ಸಿದ್ಧತೆ ನಡೆಸಲಾಗಿದೆ.



ವಿಶೇಷ ನ್ಯಾಯಾಲಯ ನೀಡಿರುವ ತೀರ್ಪಿನ ಬಗ್ಗೆ ವಕೀಲರು ಹಾಗೂ ಕಾನೂನು ತಜ್ಞರ ಸಲಹೆಯನ್ನು ಪ್ರಜ್ವಲ್ ರೇವಣ್ಣ ಅವರ ಕುಟುಂಬದವರು ಪಡೆಯುತ್ತಿದ್ದಾರೆ. ರಾಜ್ಯ ಹೈಕೋರ್ಟಿನಲ್ಲಿ ತೀರ್ಪಿನ ಬಗ್ಗೆ ಮೇಲನವಿ ಸಲ್ಲಿಸುವ ಬಗ್ಗೆ ವಕೀಲರೊಂದಿಗೆ ಗಂಭೀರ ಸಮಾಲೋಚನೆ ನಡೆಸಿದ್ದಾರೆ ಎಂದು ಕುಟುಂಬದ ಆಪ್ತ ಮೂಲಗಳು ತಿಳಿಸಿವೆ.

ಗರಿಷ್ಠ ಪ್ರಮಾಣ ಶಿಕ್ಷೆ ವಿಧಿಸಿ ನ್ಯಾಯಾಲಯ ತೀರ್ಪು ನೀಡಿರುವುದು ಪ್ರಜ್ವಲ್ ಅವರ ಕುಟುಂಬದಲ್ಲಿ ಆಘಾತವನ್ನುಂಟು ಮಾಡಿದೆ. ಶುಕ್ರವಾರ ನ್ಯಾಯಾಲಯವು ಪ್ರಜ್ವಲ್ ಅವರನ್ನು ದೋಷಿ ಎಂದು ತೀರ್ಪು ನೀಡಿತ್ತು. ನಿನ್ನೆ ಶಿಕ್ಷೆ ಪ್ರಮಾಣವನ್ನು ಪ್ರಕಟಿಸಿ ಗರಿಷ್ಠ ಪ್ರಮಾಣದ ಜೀವಾವಧಿ ಶಿಕ್ಷೆ ಹಾಗೂ ದಂಡವನ್ನು ವಿಧಿಸಿದೆ.

ತೀರ್ಪಿನ ಪ್ರತಿ ಪಡೆದು ಪ್ರಜ್ವಲ್ ಪರ ವಕಾಲತ್ತು ವಹಿಸಿದ್ದ ವಕೀಲರು ಹಾಗೂ ಕಾನೂನು ತಜ್ಞರೊಂದಿಗೆ ಯಾವ ರೀತಿ ಮೇಲನವಿ ಸಲ್ಲಿಸಬೇಕು ಎಂಬ ವಿಚಾರದ ಸುಧೀರ್ಘ ಸಮಾಲೋಚನೆ ನಡೆಸುತ್ತಿದ್ದು, ಆದಷ್ಟು ಬೇಗ ಹೈಕೋರ್ಟಿನಲ್ಲಿ ಮೇಲನವಿ ಸಲ್ಲಿಸುವ ನಿರ್ಧಾರ ಮಾಡಿದ್ದಾರೆ ಎಂದು ಹೇಳಿವೆ.ಶಿಕ್ಷೆ ಪ್ರಮಾಣವನ್ನು ಕಡಿಮೆ ಮಾಡುವಂತೆ ನ್ಯಾಯಾಲಯದಲ್ಲಿ ಹಾಜರಿದ್ದ ಪ್ರಜ್ವಲ್ ರೇವಣ್ಣ ಅವರು ಕಣ್ಣೀರು ಸುರಿಸಿ ಮನವಿ ಮಾಡಿಕೊಂಡಿದ್ದರು.

# ಸನಾತನ ಸಂಸ್ಕೃತಿ ಉಳಿವಿಗೆ, ಹಿಂದೂಗಳ ಸಂಘಟನೆಗಾಗಿ ಗಣೇಶ ಹಬ್ಬ ಆಚರಣೆ

## ಹರಿಹರದಲ್ಲಿ ಹಿಂದೂ ಮಹಾ ಗಣಪತಿಯ ವಿನಾಯಕ ಮಹೋತ್ಸವಕ್ಕೆ ಹಂದರಗಂಬ ಪೂಜೆ

**ಹರಿಹರ :** ಸ್ವಾತಂತ್ರ್ಯ ಪೂರ್ವದಲ್ಲಿ ಬ್ರಿಟಿಷರ ವಿರುದ್ಧ ಹೋರಾಟಕ್ಕೆ ಜನರನ್ನು ಒಗ್ಗೂಡಿಸಲು ಬಾಲಗಂಗಾಧರ ತಿಲಕ್ ಗಣೇಶ ಮಹೋತ್ಸವವನ್ನು ಆಚರಣೆಗೆ ತಂದರೆ, ಇಂದು ಹಿಂದೂ ಸನಾತನ ಸಂಸ್ಕೃತಿ ಉಳಿವು ಹಾಗೂ ಹಿಂದೂಗಳ ಸಂಘಟನೆಗಾಗಿ ಗಣೇಶ ಮಹೋತ್ಸವ ಆಚರಣೆ ಮಾಡಬೇಕಾಗಿದೆ ಎಂದು ಕೋಡಿಯಾಲ ಹೊಸಪೇಟೆಯಲ್ಲಿ ಪುಣ್ಯಕೋಟಿ ಮಠದ ಬಾಲಯೋಗಿ ಜಗದೀಶ್ವರ ಶ್ರೀ ಹಾಗೂ ಹರಿಹರದ ಶ್ರೀ ರಾಮಕೃಷ್ಣ ಪರಮಹಂಸ ಆಶ್ರಮದ ಶಾರದೇಶಾನಂದ ಶ್ರೀಗಳು ಹೇಳಿದರು.

ನಗರದ ಪೇಟೆ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಹಿಂದೂ ಮಹಾ ಗಣಪತಿ ಸಮಿತಿಯಿಂದ ಗುರುವಾರ



ಹಮ್ಮಿಕೊಂಡಿದ್ದ 6ನೇ ವರ್ಷದ ವಿನಾಯಕ ಮಹೋತ್ಸದ ಹಂದರಗಂಬ ಪೂಜಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಹಿಂದೂ ಮಹಾ ಗಣಪತಿ ಹೆಸರಿನಲ್ಲಿ ವಿನಾಯಕ ಮಹೋತ್ಸವ ಆಚರಣೆ ಮಾಡುವ ಮೂಲಕ ಸಮಾಜದ ಸಂಘಟನೆ ಮಾಡಲಾಗುತ್ತಿದ್ದು. ಇಂತಹ ಧಾರ್ಮಿಕ ಹಬ್ಬಗಳಿಗೆ ಸಾರ್ವಜನಿಕರು ತನು, ಮನ ಮತ್ತು ಧನದ ಸಹಕಾರ ನೀಡಿದಾಗ ಯಶಸ್ವೀ ಕಾರ್ಯಕ್ರಮ ಜರುಗಲು ಸಾಧ್ಯ.ಇದಕ್ಕೆ ಎಲ್ಲರೂ ಸಹಕಾರ ನೀಡಬೇಕೆಂದರು.

ಜಿ.ಪಂ. ಮಾಜಿ ಅಧ್ಯಕ್ಷ ಎಸ್.ಎಂ ವೀರೇಶ್, ದೂಡಾ ಮಾಜಿ ಅಧ್ಯಕ್ಷ ರಾಜನಹಳ್ಳಿ ಶಿವಕುಮಾರ್, ಬಿಜೆಪಿ ಮುಖಂಡ ಚಂದ್ರಶೇಖರ್ ಪೂಜಾರ್ ಮಾತನಾಡಿ, ಹಿಂದೂ ಜಾಗರಣ ವೇದಿಕೆ ಹಾಗೂ ಹಿಂದೂ ಮಹಾಗಣಪತಿ ಸಮಿತಿಯಿಂದ ವಿಜೃಂಭಣೆಯಿಂದ ಗಣೇಶ ಹಬ್ಬದ ಮಹೋತ್ಸವವನ್ನು ಆಚರಣೆ ಮಾಡುತ್ತಾ ಬರುತ್ತಿದ್ದು ಇದರಿಂದ ಹಿಂದೂಗಳ ಸಂಘಟನೆಗೆ ಸಹಕಾರಿಯಾಗಿದೆ ಎಂದು ಬಣ್ಣಿಸಿದರು.

ಬಿಜೆಪಿ ಮುಖಂಡರಾದ ಗಾಯತ್ರಿ ಸಿದ್ದೇಶ್ವರ ಮಾತನಾಡಿ, ಹರಿಹರದಲ್ಲಿ ನಡೆಯುವ ಹಿಂದೂ ಮಹಾಗಣಪತಿ ಮಹೋತ್ಸವ ಕಾರ್ಯಕ್ರಮ ರಾಜ್ಯದ ಗಮನ ಸೆಳೆಯುಂತಾಗಲಿ ಎಂದು ಶುಭ ಹಾರೈಸಿದರು.

ನಗರಸಭಾ ಸದಸ್ಯರಾದ ಎಂ.ಜಂಬಣ್ಣ, ಎಸ್.ಎಂ ವಸಂತ್, ಆಟೋ ಹನುಮಂತಪ್ಪ, ಅಶ್ವಿನಿ ಕೃಷ್ಣ ಮಾತನಾಡಿ, ಈ ಹಿಂದೆ ಗಣೇಶ ಹಬ್ಬದ ಶೋಭಾಯಾತ್ರೆಗಳನ್ನು ಬೇರೆ ಊರುಗಳಿಗೆ ಹೋಗಿ ನೋಡಬೇಕಾಗಿತ್ತು. ಆದರೆ ಈಗ ನಮ್ಮ ಊರಿನಲ್ಲಿ ಅದ್ದೂರಿಯಾಗಿ ಗಣೇಶ ಹಬ್ಬ ಆಚರಣೆ ಮಾಡುತ್ತಿರುವುದು ಹರ್ಷವಾಗುತ್ತಿದೆ. ಈ ಆಚರಣೆಯು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ವಿಜೃಂಭಣೆಯಿಂದ ಆಗಲಿ ಎಂದು ಹಾರೈಸಿದರು.

# ಆ.7 ರಂದು ಹಿ.ಪ್ರಾ.ಶಾಲೆಗಳ ಕ್ರೀಡಾಕೂಟ

**ಚಿಕ್ಕಮಗಳೂರು :** ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಪ್ರಕೃತಿ ಅಕಾಡೆಮಿ ಹಾಗೂ ಗವನಹಳ್ಳಿಯ ಹಿರಿಯ ಪ್ರಾಥಮಿಕ ಶಾಲೆಯ ಸಂಯುಕ್ತ ಆಶ್ರಯದಲ್ಲಿ ಕಸಬಾ-2 ವಲಯದ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟವು ಆಗಸ್ಟ್ 7 ರಂದು ಬೆಳಿಗ್ಗೆ 9 ಗಂಟೆಯಿಂದ ನಗರದ ನೇತಾಜಿ ಸುಭಾಶ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ನಡೆಯಲಿದೆ.

## ಮಾಜಿ ಸೈನಿಕರ ಮಕ್ಕಳಿಗೆ ನಗದು ಪ್ರಶಸ್ತಿ

**ಚಿಕ್ಕಮಗಳೂರು :** ಹಾಸನದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ನಡೆದ ಸಾರ್ವತ್ರಿಕ ಪರೀಕ್ಷೆಯಲ್ಲಿ ಗರಿಷ್ಠ ಅಂಕಗಳನ್ನು ಪಡೆದ ಕರ್ನಾಟಕದ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ ಜನರಲ್ ಕೆ.ಎಸ್.ತಿಮ್ಮಯ್ಯ ನಗದು ಪ್ರಶಸ್ತಿ ನೀಡಲು ಘೋಷಿಸಲಾಗಿದೆ.

ಪ್ರತಿ ಜಿಲ್ಲೆಯ ಎಸ್‌ಎಸ್‌ಎಲ್‌ಸಿಯಲ್ಲಿ ಗರಿಷ್ಠ ಅಂಕ ಪಡೆದ ಇಬ್ಬರು ಹಾಗೂ ದ್ವಿತೀಯ ಪಿಯುಸಿಯಲ್ಲಿ ಗರಿಷ್ಠ ಅಂಕ ಪಡೆದ ಒಬ್ಬರು ಈ ಪ್ರಶಸ್ತಿಗೆ ಅರ್ಹರಾಗಿದ್ದಾರೆ. ಈ ಪ್ರಶಸ್ತಿಯನ್ನು ಪಡೆಯಲು ಶೇ.60 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಮಾಜಿ ಸೈನಿಕರ ಮಕ್ಕಳು ಹಾಸನದ ಶಂಕರೀಪುರಂನಲ್ಲಿರುವ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಕಾರ್ಯಾಲಯದಲ್ಲಿ ಅಕ್ಟೋಬರ್ 31ರೊಳಗೆ ತಮ್ಮ ಹೆಸರು ನೋಂದಾಯಿಸಿಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಪತ್ರಕರ್ತರ ಪ್ರಾಮಾಣಿಕ ವರದಿ ಅಧಿಕಾರದಲ್ಲಿರುವವರನ್ನು ಎಚ್ಚರಿಸುವಂತಿರಬೇಕು : ಪುರಸಭೆ ಅಧ್ಯಕ್ಷ ಭಂಡಾರಿ ಶ್ರೀನಿವಾಸ್

**ಕಡೂರು :** ಪತ್ರಕರ್ತರ ಪ್ರಾಮಾಣಿಕ ವರದಿ ಅಧಿಕಾರದಲ್ಲಿರುವವರನ್ನು ಎಚ್ಚರಿಸುವಂತಿರಬೇಕು ಎಂದು ಪುರಸಭೆ ಅಧ್ಯಕ್ಷ ಭಂಡಾರಿ ಶ್ರೀನಿವಾಸ್ ಹೇಳಿದರು.

ಕರ್ನಾಟಕ ಯುನೈಟೆಡ್ ವರ್ಕಿಂಗ್ ಜರ್ನಲಿಸ್ಟ್ ಅಸೋಸಿಯೇಷನ್, ಚಿಕ್ಕಮಗಳೂರು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ಕಡೂರು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ, ಹಿಂದುಳಿದ ವರ್ಗಗಳ ಮಾನ್ಯತೆ ಪಡೆದ ಸಂಪಾದಕರು ಮತ್ತು ವರದಿಗಾರರ ಸಂಘಗಳ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಮತ್ತು ಅಭಿನಂದನಾ ಸಮಾರಂಭದಲ್ಲಿ ಸನ್ಮಾನಿತರನ್ನು ಸನ್ಮಾನಿಸಿ ಮಾತನಾಡಿದ ಅವರು ಪತ್ರಕರ್ತರ ಬೇಡಿಕೆಗಳು ಹಲಾವಾರಿದೆ, ತಮ್ಮ ವ್ಯಾಪ್ತಿಯಲ್ಲಿ ಪಟ್ಟಣದ ಯಾವುದಾದರೂ ಜಾಗದಲ್ಲಿ ನಿವೇಶನ ಒದಗಿಸಿ ಕೊಡುಬಹುದು, ಪತ್ರಕರ್ತರ ಭವನ ಮತ್ತು ನಿವೇಶನ ಇಲ್ಲದ ಪತ್ರಕರ್ತರೀಗೆ ನಿವೇಶನ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಪತ್ರಕರ್ತರ ಸಹಕಾರದಿಂದ ತಾವು ಈ ಮಟ್ಟಕ್ಕೆ ಬೆಳದಿದ್ದು, ಪತ್ರಕರ್ತರಿಗೆ ಋಣಿ ಆಗಿರುತ್ತೇನೆ ಎಂದರು.

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಮತ್ತು ಮಾಜಿ ಸಚಿವ



ಸಿ.ಟಿ.ರವಿ ಪ್ರಜಾಪ್ರಭುತ್ವಕ್ಕೆ ಗಟ್ಟಿಗೊಳಸಲು, ಸಮಾಜಕ್ಕೆ ಮಾರ್ಗದರ್ಶನ ಮಾಡುವ ಕೆಲಸ ಮಾಡುತ್ತಿದ್ದುದರಿಂದ ಪತ್ರಿಕಾ ರಂಗವನ್ನು ನಾಲ್ಕನೆಯ ಅಂಗ ಎಂದು ಕರೆಯಲಾಗಿದೆ. ಡಿವಿಜಿ ನಾಡಿನ ಸಾಂಸ್ಕೃತಿಕ, ಆಧ್ಯಾತ್ಮಿಕ ಚಿಂತಕರಾಗಿ ಮತ್ತು ಪತ್ರಕರ್ತರೂ ಆಗಿ ಕೆಲಸ ಮಾಡಿದವರು. ಪತ್ರಕರ್ತರ ಬೇಡಿಕೆಯಾದ ಕ್ಷೇಮನಿಧಿ ಸ್ಥಾಪಿಸಲು ಸರ್ಕಾರದೊಂದಿಗೆ ಚರ್ಚಿಸಲಾಗುವುದು ಎಂದ ಅವರು ಪತ್ರಕರ್ತರು ತಮ್ಮ ಹಕ್ಕನ್ನು ಕೇಳಿ ಪಡೆಯುವಂತಾಗಿರುವುದು ವಿಪರ್ಯಾಸ ಎಂದರು.

ಸಂಘದ ಸಂಸ್ಥಾಪಕ ಅಧ್ಯಕ್ಷ ಕೆ.ಜಯಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿ ಸಂಘಟನೆಗಳು ಮುಂದಾಳತ್ವ ವಹಿಸಿರುವವರಿಗೆ ಮಾತ್ರ ಉಪಯೋಗ ಆಗುತ್ತಿದೆ, ಅವರಿಗೆ ಆ ಸ್ಥಾನಕ್ಕೆ ಕಳುಹಿಸಿದ ಸಾಮಾನ್ಯ ಪತ್ರಕರ್ತರಿಗೆ ಪ್ರಯೋಜನ ಇಲ್ಲದಾಗಿದೆ. ಸ್ಥಳೀಯ ಪತ್ರಕರ್ತರಿಗೆ ಕನಿಷ್ಠ ಕ್ಷೇಮನಿಧಿ, ಬಸ್ ಪಾಸ್ ವ್ಯವಸ್ಥೆ ಮಾಡಿ ಕೊಡಲು ಸರ್ಕಾರ ಚಿಂತಿಸಬೇಕು. ಎಲ್ಲರನ್ನೂ ಒಂದಾಗಿಸಿ ಮುನ್ನಡೆಯುವ ನಾಯಕರ ಅವಶ್ಯಕತೆ ಸಂಘಟನೆಯ ಅಧ್ಯಕ್ಷರಾದವರಿಗೆ ಇರಬೇಕು, ಈ ಗುಣ ನಮ್ಮ ಜಿಲ್ಲಾಧ್ಯಕ್ಷ ಸಿ.ಹೆಚ್.ಮೂರ್ತಿ ಅವರಿಗಿದೆ, ತಾವು ಆಸಕ್ತಿ ವಹಿಸಿ ಇವರನ್ನು ಅಧ್ಯಕ್ಷರನ್ನಾಗಿ ಮಾಡಿದ್ದು ಸಾರ್ಥಕ ಎನಿಸುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧ್ಯಕ್ಷ ಸಿ.ಹೆಚ್. ಮೂರ್ತಿ ಮಾತನಾಡಿ ಸಮಾರಂಭದ ಯಶಸ್ಸಿಗೆ ಸಹಕರಿಸಿದ ಎಲ್ಲರಿಗೂ ಧನ್ಯವಾದ ತಿಳಿಸಿ ಪತ್ರಕರ್ತರಿಗಾಗಿ ಇದುವರೆಗೂ ಸರ್ಕಾರ ಯಾವುದೇ ರೀತಿಯ ಸಹಕಾರವನ್ನು ಸಮರ್ಪಕವಾಗಿ ನೀಡಿಲ್ಲ, ಸರ್ಕಾರ ನೀಡುತ್ತಿರುವ ಬಸ್ ಪಾಸ್ ಗ್ರಾಮೀಣ ಭಾಗದ ಪತ್ರಕರ್ತರಿಗೆ ಸಿಗುತ್ತಿಲ್ಲ. ಉನ್ನತ ಸ್ಥಾನದಲ್ಲಿರುವವರು ತಮ್ಮ ವೈಯುಕ್ತಿಕ ಏಳಿಗೆಗಾಗಿ ಸಂಘವನ್ನು ಬಳಸಿಕೊಂಡು ನಿಜವಾದ ಪತ್ರಕರ್ತರನ್ನು ಕಡೆಗಣಿಸಿದ್ದಾರೆ, ಈ ಮನೋಭಾವ ಬದಲಾಗಿ ಪತ್ರಕರ್ತರೆಲ್ಲಾ ತಮ್ಮ ಕುಟುಂಬ ಎಂದು ಬಯಸುವವರು ರಾಜ್ಯಾಧ್ಯಕ್ಷ ಸ್ಥಾನಕ್ಕೆ ಬಂದಾಗ ಪತ್ರಕರ್ತರ ಏಳಗೆ ಸಾಧ್ಯ ಎಂದರು.

ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿದ ಭರತನಾಟ್ಯ ಕಲಾವಿದರು, ಯೋಗ ಪಟುಗಳು ಮತ್ತು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಗಣ್ಯರಿಗೆ, ಮತ್ತು ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ನೀಡಿ ಸನ್ಮಾನ ಮಾಡಲಾಯಿತು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಎಲ್. ಮೂರ್ತಿ, ವಕೀಲ ಹಾಗೂ ಪತ್ರಕರ್ತ ಸುಧೀರ್ ಕುಮಾರ್ ಮೊರಳ್ಳಿ, ರಾಜ್ಯ ಕಾರ್ಯದರ್ಶಿ ರಾಘವೇಂದ್ರ ಕೆಸವಳಲು, ಜಿಲ್ಲಾ ಗೌರವಾಧ್ಯಕ್ಷ ಕೆ.ವಿ .ವಾಸು, ತಾಲೂಕು ಕುಳುವ ಸಮಾಜದ ಅಧ್ಯಕ್ಷ ಎ.ಜಿ.ಗಿರೀಶ್, ಬೀರೂರು ಪುರಸಭೆ ಮಾಜಿ ಅಧ್ಯಕ್ಷ ವನಿತ ಮಧು, ರಾಷ್ಟ್ರೀಯ ಮಂಡಳಿ ಸದಸ್ಯ ಕೆ.ಎಸ್. ಸೋಮಶೇಖರ್, ತಾಲೂಕು ಅಧ್ಯಕ್ಷರುಗಳಾದ ಟಿ.ಜಿ.ಲೋಕೇಶಪ್ಪಪ, ಜಿನೇಶ್ ಇರ್ವತ್ತೂರು, ಬಿ.ಲೋಕೇಶಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಟಿ.ಪ್ರಕಾಶ್, ಹಿರೆಮಗಳೂರು ಪುಟ್ಟಸ್ವಾಮಿ, ಜಿಲ್ಲಾ ಮತ್ತು ಜಿಲ್ಲೆಯ ಎಲ್ಲಾ ತಾಲೂಕಿನ ಪದಾಧಿಕಾರಿಗಳು ಇದ್ದರು.

# ಮುಖ್ಯಮಂತ್ರಿ ಸಿದ್ದರಾಮಯ್ಯ ಜನ್ಮದಿನ : ವಿಶೇಷ ಪೂಜೆ, ಪ್ರಾರ್ಥನೆ



**ಚಿಕ್ಕಮಗಳೂರು, ಆ. 3:** ಮುಖ್ಯಮಂತ್ರಿ ಸಿದ್ದರಾಮಯ್ಯನವರ 78ನೇ ಹುಟ್ಟುಹಬ್ಬದ ಪ್ರಯುಕ್ತ ಭಾನುವಾರ ಬ್ಲಾಕ್ ಕಾಂಗ್ರೆಸ್ ವತಿಯಿಂದ ನಗರದ ತಾಲ್ಲೂಕು ಕಚೇರಿ ಸಮೀಪದ ಗಣಪತಿ ದೇವಾಲಯ ದಲ್ಲಿ ವಿಶೇಷ ಪೂಜೆ ಹಾಗೂ ಬಡ ಮಕಾನ್ ದರ್ಗಾದಲ್ಲಿ ಪಕ್ಷದ ಕಾರ್ಯಕರ್ತರು ದೀರ್ಘಾಯುಷ್ಯಿಗೆ ಪ್ರಾ ರ್ಥನೆ ಸಲ್ಲಿಸಿದರು.

ಬಳಿಕ ಮಾತನಾಡಿದ ಶಾಸಕ ಹೆಚ್.ಡಿ.ತಮ್ಮಯ್ಯ ಜಾತ್ಯಾತೀತ ಸಿದ್ಧಾಂತ ಹಾಗೂ ಶೋಷಿತ ಪರವಾಗಿ ಗಟ್ಟಿಯಾಗಿ ಧ್ವನಿಗೂಡಿಸಿ ಅಪರೂಪದ ನಾಯಕ ಸಿದ್ದರಾಮಯ್ಯನವರು. 1978ರ ಇಸವಿಯಲ್ಲಿ ತಾಲ್ಲೂಕು ಬೋರ್ಡ್ ಸದಸ್ಯರಾಗಿ ಇದೀಗ ರಾಜ್ಯದಲ್ಲಿ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿ ನಾಡನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುತ್ತಿದ್ದಾರೆ ಎಂದರು.

ಸಮಾಜವಾದಿ ವಿಚಾರಧಾರೆಗಳಲ್ಲಿ ಗಟಿಬದ್ಧರಾದ ಸಿದ್ದರಾಮಯ್ಯನವರು ಜನಸಾಮಾನ್ಯರ ಕಷ್ಟಕಾಪ ಣ್ಯಗಳಿಗೆ ಸ್ಪಂದಿಸಲು ಈ ಬಾರಿಯ ಸರ್ಕಾರದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ರಾಜ್ಯದ ಜನತೆಗೆ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಬದುಕು ರೂಪಿಸಿಕೊಟ್ಟ ದೇಶಕಂಡ ಅಪರೂಪದ ರಾಜಕಾರಣಿ ಎಂದು ಹೇಳಿದರು.

ಸಿದ್ದರಾಮಯ್ಯನವರು ಯಾವುದೇ ಒಂದು ಜನಾಂಗ ಮತ್ತು ವಿಚಾರಕ್ಕೆ ಸೀಮಿತರಾದ ನಾಯಕರಲ್ಲ. ಸರ್ವಜನಾಂಗದ ಅಭಿವೃದ್ದಿಗಾಗಿ ಪಣತೊಟ್ಟ ಜನನಾಯಕ ಎಂದ ಅವರು ಡಾ॥ ಬಿ.ಆರ್.ಅಂಬೇಡ್ಕರ್, ಬಸವೇಶ್ವರರ ತತ್ವ, ಸಿದ್ಧಾಂತಗಳನ್ನು ವೈಯಕ್ತಿಕ ಹಾಗೂ ಪಕ್ಷದಲ್ಲಿ ಅಳವಡಿಸಿಕೊಂಡು 78ರ ಹರೆಯದಲ್ಲೂ ನಾಡಿಗಾಗಿ ದುಡಿಯುತ್ತಿರುವ ನಾಯಕರು ಎಂದು ಬಣ್ಣಿಸಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ.ಮಂಜೇಗೌಡ ಮಾತನಾಡಿ ಹಳ್ಳಿಗಾಡಿನ ಬದುಕಿನ ಎಲ್ಲ ಅಡೆತಡೆ ಗಳನ್ನು ಸವಾಲಾಗಿ ಸ್ವೀಕರಿಸಿ ಮೆಟ್ಟಿನಿಂತು ಸಾಧನೆಯ ಶಿಖರ ಏರಿದ ಸಿದ್ದರಾಮಯ್ಯನವರ ಬಾಳದಾರಿ ಅನೇಕರಿಗೆ ಮಾರ್ಗದರ್ಶನ ಮಾತ್ರವಲ್ಲ ಸ್ಫೂರ್ತಿಯಾಗಿದೆ ಎಂದು ತಿಳಿಸಿದರು.ನಾಡಿನ ಜನತೆ ಹಸಿವಿನಿಂದ ಬಳಲಬಾರದೆಂಬ ದೃಷ್ಟಿಯಿಂದ ಅನ್ನಭಾಗ್ಯ ಯೋಜನೆ ಜಾರಿಗೊಳಿಸಿ ಹಸಿದವರಿಗೆ ಆಸರೆಯಾದ ಸಿದ್ದರಾಮಯ್ಯನವರ ವ್ಯಕ್ತಿತ್ವ, ವಿಚಾರಧಾರೆಗಳು ಇಂದಿನ ಯುವಪೀಳಿಗೆಗೆ ಮಾ ದರಿಯಾಗಿದ್ದು, ಆಧುನಿಕ ಜಗತ್ತಿನಲ್ಲಿ ರಾಜ್ಯದ ಅಭಿವೃದ್ದಿಗೆ ಶ್ರಮಿಸುತ್ತಿದ್ದಾರೆ ಎಂದರು.

ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಎಂ.ಎಲ್.ಮೂರ್ತಿ ಮಾತನಾಡಿ ಕಾರ್ಯಕರ್ತರು ಸಿದ್ದರಾಮಯ್ಯನ ವರ ಹುಟ್ಟುಹಬ್ಬ ಆಚರಿಸಲು ವ್ಯಕ್ತಿಯಿಂದಲ್ಲ. ಅವರಲ್ಲಿರುವ ಜಾತ್ಯಾತೀತ ತತ್ವ, ಸಿದ್ಧಾಂತವನ್ನು ಒಪ್ಪಿಕೊಂಡು ಹಲವೆಡೆ ಕಾರ್ಯಕರ್ತರು ಜನ್ಮದಿನವನ್ನು ಆಚರಿಸಲು ಕಾರಣವಾಗಿದೆ ಎಂದು ತಿಳಿಸಿದರು.

# ನಟ ಡಾ॥ ಪುನೀತ್‌ರಾಜ್‌ಕುಮಾರ್ ಪ್ರತಿಮೆ ಸ್ಥಾಪನೆ

**ಚಿಕ್ಕಮಗಳೂರು :** ಡಾ॥ ರಾಜ್‌ಕುಮಾರ್ ಅಭಿಮಾನಿಗಳ ಸಂಘದಿಂದ ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ದಿವಂಗತ ಡಾ॥ ಪುನೀತ್‌ರಾಜ್‌ಕುಮಾರ್ ನೂತನ ಪ್ರತಿಮೆಯನ್ನು ಭಾನುವಾರ ಸ್ಥಾ ಪಿಸಲಾಯಿತು.

ಈ ವೇಳೆ ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಐ.ಕೆ.ಓಂಕಾರೇಗೌಡ ಸುಮಾರು 5.6 ಅಡಿ ಎತ್ತರದ ಪ್ರತಿಮೆಯನ್ನು ಸ್ಥಾಪಿಸಲಾಗಿದ್ದು. ಮುಂದಿನ ಸೆಪ್ಟೆಂಬರ್ ತಿಂಗಳ ಅಂತ್ಯದೊಳಗೆ ಆಜಾದ್ ವೃತ್ತದಲ್ಲಿ ದೊ ಡ್ಡಮಟ್ಟದ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಸೆಪ್ಟೆಂಬರ್ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್, ಅಶ್ವಿನಿ ಪುನೀ ತ್‌ರಾಜ್‌ಕುಮಾರ್ ಸೇರಿದಂತೆ ಅನೇಕ ಸಿನಿತಾರೆಯನ್ನು ನೇತೃತ್ವದಲ್ಲಿ ಪ್ರತಿಮೆಯನ್ನು ಅನಾವರಣಗೊಳಿಸ ಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಸುಜಾತ ಶಿವಕುಮಾರ್, ರೂಪಕುಮಾರ್, ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಸಂಘದ ಗೌರವಾಧ್ಯಕ್ಷ ಎಲ್.ವಿ.ಕೃಷ್ಣಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಜಿ. ಬಸವರಾಜ್, ಉಪಾಧ್ಯಕ್ಷರಾದ ನೆಟ್ಟೆಕೆರೆ ಹಳ್ಳಿ ಜಯಣ್ಣ, ರೇವನಾಥ್, ಗುರುಮೂರ್ತಿ, ಕಾರ್ಯದರ್ಶಿಗಳಾದ ಕರ್ಕಿಪೇಟೆ ಕುಮಾರ್, ಮಹೇಶ್, ಆನಂದ್, ಓಂಕಾರಮೂರ್ತಿ ಮತ್ತಿತರರು ಹಾಜರಿದ್ದರು.



## ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ವಿವಿಧ ಯೋಜನೆಗಳಡಿ ಆನ್‌ಲೈನ್ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು 2025–26ನೇ ಸಾಲಿನ ಜಿಲ್ಲಾ ವಲಯ ಯೋಜನೆಯಡಿ ಬಂಡವಾಳ ಹೂಡಿಕೆ, ವೃತ್ತಿಪರ/ವೃತ್ತಿ ನಿರತ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆ ಸರಬರಾಜು ಮತ್ತು ಬಡ್ಡಿ ಸಹಾಯಧನ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಗ್ರಾಮೀಣ ಪ್ರದೇಶದ ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಆಸಕ್ತರು https://shimoga.nic.in ರಲ್ಲಿ ದಿ.17/08/2025 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ –1, 2ಎ, 2ಬಿ, 3ಎ, 3ಬಿ, ಪ್ರ.ಜಾ/ಪ್ರ.ವರ್ಗದ ಸಾಮಾನ್ಯ ಕೋರ್ಸಿನ ವಿದ್ಯಾರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ.

ಆಸಕ್ತ ವಿದ್ಯಾರ್ಥಿಗಳು https://shp.karnataka.gov.in/bcwd ವೆಬ್‌ಸೈಟ್ ಮೂಲಕ ದಿ: 14/08/2025 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆತಾಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರಿ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.inನ್ನು ಸಂಪರ್ಕಿಸಿ, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಇ–ಮೇಲ್ bcwdhelpline@gmail.com ಮುಖಾಂತರ ಅಥವಾ ಜಿಲ್ಲಾ/ತಾಲೂಕು ಅಧಿಕಾರಿಗಳನ್ನು ಅಥವಾ ಸಹಾಯವಾಣಿ ಸಂ. 8050770004/ 8050770005 ಗಳನ್ನು ಸಂಪರ್ಕಿಸುವುದು.

## ಮಾಜಿ ಸೈನಿಕರ ಮಕ್ಕಳಿಗೆ ವಿವಿಧ ಶಿಷ್ಯವೇತನ ಮತ್ತು ನಗದು ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಶಿವಮೊಗ್ಗ:** ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯು 2024–25 ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಗರಿಷ್ಠ ಅಂಕ ಪಡೆದ ಕರ್ನಾಟಕ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ,

2025–26 ನೇ ಸಾಲಿನ ಒಂದನೇ ತರಗತಿಯಿಂದ ಅಂತಿಮ ವರ್ಷದ ಪದವಿ/ಡಿಪ್ಲೋಮಾ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ಮೂಲ ನಿವಾಸಿ ಮಕ್ಕಳಿಗೆ ಹಾಗೂ ಕರ್ನಾಟಕದಲ್ಲಿ ನೆಲೆಸಿರುವ ಹೊರರಾಜ್ಯದ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಿದೆ.

ಜಿಲ್ಲಾ ಕಚೇರಿಯಲ್ಲಿ ಶುಲ್ಕ ರಹಿತವಾಗಿ ಅರ್ಜಿಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ನವೆಂಬರ್ 30, 2025 ರೊಳಗಾಗಿ ಸಲ್ಲಿಸುವಂತೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಹೆಚ್ಚಿನ ಮಾಹಿತಿಗಾಗಿ ದೂ.ಸಂ:08182220925 ಗೆ ಸಂಪರ್ಕಿಸುವುದು .

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಗದಗ :** 2025–26 ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಉದ್ಯೋಗವಕಾಶವನ್ನು ಒದಗಿಸುವ ನಿಟ್ಟಿನಲ್ಲಿ ಹೋಟೆಲ್ ಮ್ಯಾನೇಜ್‌ಮೆಂಟ್ ವೃತ್ತಿಪರ ತರಬೇತಿಯನ್ನು ಇನ್‌ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ ಬೆಂಗಳೂರು ಇಲ್ಲಿ ನೀಡಲಾಗುತ್ತಿದ್ದು, ಸದರಿ ತರಬೇತಿಗೆ ವಿದ್ಯಾರ್ಥಿಗಳಿಂದ ಸೇವಾಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 11.08.2025. ಆಗಿರುತ್ತದೆ.

ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪಾರ್ಶಿ). ವಿದ್ಯಾರ್ಥಿಯು ಕನಿಷ್ಠ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 8.00 ಲಕ್ಷ ಕ್ಕಿಂತ ಮೀರಿರಬಾರದು.ವಿದ್ಯಾರ್ಥಿಯ ವಯೋಮಿತಿ: ಕನಿಷ್ಠ 18 ಹಾಗೂ ಗರಿಷ್ಠ 35 ವರ್ಷಗಳು ಮೀರಿರಬಾರದು. ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರಿಯಲ್ಲಿರುವ ಅಭ್ಯರ್ಥಿಗಳು ಅರ್ಹರಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ : 8277799990 ಇವರನ್ನು ಸಂಪರ್ಕಿಸಬಹುದು.

## ಕೊಟ್ಟಿಗಿನಹಾಳ ಗ್ರಾಮಕ್ಕೆ ಶಾಸಕ ಪತ್ರ ಗುರುದತ್ ಭೇಟಿ



**ವಿಜಯನಗರ :** ಹೊಸಪೇಟೆ ತಾಲೂಕಿನ ಗಾದಿಗನೂರು ಗ್ರಾಮ ಪಂಚಾಯತಿಯಲ್ಲಿ ಕ್ಷೇತ್ರದ ಶಾಸಕರ ಪುತ್ರರಾದ ಸಮಾಜ ಸೇವಕರಾದ ಹೆಚ್. ಜಿ. ಗುರುದತ್ತ ರವರು ಶುಕ್ರವಾರದಂದು ಅದೇ ಪಂಚಾಯತಿ ವ್ಯಾಪ್ತಿಯ ಕೊಟ್ಟಿಗೆನಾಳ್ ಗ್ರಾಮಕೆ ಆಗಮಿಸಿ ಅಲ್ಲಿ ಕುಂದು ಕೊರತೆಗಳನ್ನು ಮುಖಂಡರ ಜೊತೆ ಚರ್ಚಿಸಿ ಹಾಗೆ ಅಲ್ಲಿನ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಆಹಾರ ಸಾಮಗ್ರಿಗಳು ಪರೀಕ್ಷಿಸಿದರು. ಹಾಗೂ ಅಲ್ಲಿನ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿನ ತೊಂದರೆಗಳನ್ನು ಶೀಘ್ರದಲ್ಲೇ ಪರಿಹರಿಸಬೇಕೆಂದು ಅಧಿಕಾರಿಗಳಿಗೆ ಹೇಳಿದರು ಈ ಸಂದರ್ಭದಲ್ಲಿ ಊರಿನ ಎಲ್ಲಾ ಕಾರ್ಯಕರ್ತರು ಹಿರಿಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ 9360 ಪ್ರಕರಣ ಇತ್ಯರ್ಥ, ವಿಚ್ಛೇದನ ಕೋರಿ ಸಲ್ಲಿಸಿದ್ದ 23 ಜೋಡಿ ವೈವಾಹಿಕ ಜೀವನ ಸುಖಾಂತ್ಯ



**ದಾವಣಗೆರೆ:** ದಾವಣಗೆರೆ ಜಿಲ್ಲೆಯಾದ್ಯಂತ ಎಲ್ಲಾ ನ್ಯಾಯಾಲಯಗಳಲ್ಲಿ ಜುಲೈ 12 ರಂದು ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿತ್ತು. ವಿವಿಧ ಪ್ರಕರಣಗಳ 18024 ಕೈಗೆತ್ತಿಕೊಂಡಿದ್ದು, ಅದರಲ್ಲಿ ಒಟ್ಟು 9,360 ಜಾರಿಯಲ್ಲಿರುವ ಪ್ರಕರಣಗಳು ಮುಕ್ತಾಯಗೊಂಡು, ರೂ.14,33,66,571 ಹಣದ ಪ್ರಕರಣ ಹಾಗೂ ವ್ಯಾಜ್ಯ ಪೂರ್ವ 2,62,712 ಪ್ರಕರಣಗಳು ಮುಕ್ತಾಯಗೊಂಡು ರೂ.72,62,10,788 ಹಣದ ಪರಿಹಾರವಾಗಿ ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ತಿಳಿಸಿದ್ದಾರೆ.

ಜಿಲ್ಲೆಯ ನ್ಯಾಯಾಲಯಗಳಲ್ಲಿ 77 ಅಪರಾಧಿಕ, 195 ಚೆಕ್ ಅಮಾನ್ಯ, 43 ಬ್ಯಾಂಕ್ ವಸೂಲಾತಿ, 14 ಇತರೆ ಹಣ ವಸೂಲಾತಿ, 74 ಅಪಘಾತ ಪರಿಹಾರ, 144 ವಿದ್ಯುತ್ ಕಳ್ಳತನ, 02 ಅಕ್ರಮ ಮರಳು ಗಣಿಗಾರಿಕೆ, 51 ಪಾಲು ವಿಭಾಗಕ್ಕಾಗಿ ದಾಖಲಿಸಿದ ದಾವೆ, 26 ಭೂ ಸ್ವಾಧೀನ ಪರಿಹಾರ ಜಾರಿ ಅರ್ಜಿ, 132 ಇತರೆ ರಾಜಿ ಅರ್ಜಿ ಹಾಗೂ ಹಲವು ಕಾರಣಕ್ಕಾಗಿ ದಾಖಲಿಸಿದ 88 ದಾವೆಗಳು ಮತ್ತು ಜೀವನಾಂಶ ಕೋರಿ ದಾಖಲಿಸಿದ್ದ 50 ಪ್ರಕರಣಗಳು ಸೇರಿ ಒಟ್ಟು 9360 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ.

23 ಜೋಡಿ ವೈವಾಹಿಕ ಜೀವನ ಸುಖಾಂತ್ಯ:

ಜಿಲ್ಲೆಯಲ್ಲಿ ಒಟ್ಟು 225 ಜೋಡಿ ವಿವಿಧ ಕಾರಣಗಳಿಂದ ವಿಚ್ಛೇದನ ಮತ್ತು ಜೀವನಾಂಶಕ್ಕಾಗಿ ಪ್ರಕರಣ ದಾಖಲಿಸಿ ನ್ಯಾಯಾಲಯ ಮೆಟ್ಟಿಲೇರಿದ್ದು, ಅದರಲ್ಲಿ 20 ಪ್ರಕರಣ ದಾವಣಗೆರೆ ಜಿಲ್ಲಾ ಕೌಟುಂಬಿಕ ನ್ಯಾಯಾಲಯ ಹಾಗೂ ಹರಿಹರ, ಚನ್ನಗಿರಿ ಹಾಗೂ ಹೊನ್ನಾಳಿ ತಾಲ್ಲೂಕು ನ್ಯಾಯಾಲಯದಲ್ಲಿ ತಲಾ ಒಂದರಂತೆ ಒಟ್ಟು 23 ಜೋಡಿಗಳು ತಮ್ಮ ವೈಮನಸ್ಸುಗಳನ್ನು ಮರೆತು ಒಂದಾಗಿ ಸಹಬಾಳ್ವೆ ನಡೆಸಲು ಒಪ್ಪಿಕೊಂಡಿದ್ದು ಸುಖಾಂತ್ಯ ಕಂಡಿವೆ. ರಾಷ್ಟ್ರೀಯ ಲೋಕ್ ಅದಾಲತ್ ನಿಂದ ಸಾಕಷ್ಟು ಜನರಿಗೆ ಅನುಕೂಲವಾಗಿದೆ ಎಂದು ಅವರು ತಿಳಿಸಿದ್ದಾರೆ.

## ಲೋಕ ಅದಾಲತ್‌ನಿಂದ ಕಕ್ಷಿದಾರರ ಬಾಂಧವ್ಯ ಉಳಿವು: ನ್ಯಾ.ರಾಜೇಶ್ವರಿ ಎನ್.ಹೆಗಡೆ




**ಚಿಕ್ಕಮಗಳೂರು:** ಲೋಕ ಅದಾಲತ್‌ನಲ್ಲಿ ರಾಜಿ ಸಂಧಾನದಿಂದ ಪ್ರಕರಣಗಳು ಶೀಘ್ರ ಇತ್ಯರ್ಥಗೊಳ್ಳುವುದರ ಜೊತೆಗೆ ಕಕ್ಷಿದಾರರಲ್ಲಿ ಬಾಂಧವ್ಯವೂ ಉಳಿಯಲಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರೂ, ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರೂ ಆದ ರಾಜೇಶ್ವರಿ ಎನ್.ಹೆಗಡೆ ಹೇಳಿದರು.

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ನಗರದ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ನಡೆದ ಲೋಕ ಅದಾಲತನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ನ್ಯಾಯಾಲಯಗಳಲ್ಲಿ ಸಾವಿರಾರು ಪ್ರಕರಣಗಳು ಬಾಕಿ ಉಳಿದಿದ್ದು, ಅವೆಲ್ಲಾ ಇತ್ಯರ್ಥಗೊಳ್ಳಬೇಕೆಂದರೆ ಸಾಕಷ್ಟು ಕಾಲಾವಕಾಶ ಹಿಡಿಯಲಿದೆ. ಹಾಗಾಗಿ ಲೋಕ ಅದಾಲತ್‌ನಲ್ಲಿ ಅವುಗಳನ್ನು ಬಗೆಹರಿಸಿಕೊಳ್ಳುವುದು ಸೂಕ್ತ. ಇದರಿಂದ ಕಕ್ಷಿದಾರರು ಪಾವತಿಸಬೇಕಾದ ನ್ಯಾಯಾಲಯದ ಶುಲ್ಕ ಹಾಗೂ ಸಮಯ ಉಳಿತಾಯವಾಗಲಿದೆ.

ವಿವಾದವನ್ನು ಬಗೆಹರಿಸಿಕೊಳ್ಳುವ ಸರಳ ವಿಧಾನ ಮುಂದೆ ಇರುವಾಗ ಸಂಘರ್ಷವನ್ನು ಯಾಕಾಗಿ ಬೆಳೆಸಿಕೊಳ್ಳಬೇಕು? ಪ್ರತಿಯೊಬ್ಬರಲ್ಲೂ ಪ್ರಕರಣಗಳು ಶೀಘ್ರ ಇತ್ಯರ್ಥವಾಗದಿರುವ ಬಗ್ಗೆ ಅಸಮಾಧಾನವಿದ್ದೇ ಇರುತ್ತದೆ. ನಿಮ್ಮೆದುರು ಇರುವ ಕಕ್ಷಿದಾರರು ನಿಮ್ಮ ಶತ್ರುವಲ್ಲ, ಬದಲಾಗಿ ನಿಮ್ಮೊಳಗಿರುವ ಸಿಟ್ಟು, ಅಹಂಕಾರ ಹಾಗೂ ಸಂಘರ್ಷದ ಮನಸ್ಥಿತಿ ಇದೆಯಲ್ಲ ಅವೇ ನಿಮ್ಮ ಶತ್ರು. ಆಸ್ತಿ,

ಹಣ ಸಂಪಾದನೆ ಮಾಡುವುದು ನಮ್ಮ ಸುಖ, ಸಂತೋಷಕ್ಕಾಗಿ. ನಮ್ಮ ಸುಖಕ್ಕೆ ಸಿಗದ ಆಸ್ತಿ, ಹಣ ವಯಸ್ಸು ಇರುವಾಗ ಸಿಗದಿದ್ದಲ್ಲಿ ಪ್ರಯೋಜನವಾದರೂ ಏನು ಎಂದು ಪ್ರಶ್ನಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆದ ವಿ.ಹನುಮಂತಪ್ಪ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಸಂಧಾನಕಾರರು, ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಭಾನುಮತಿ, ನ್ಯಾಯಾಧೀಶರುಗಳಾದ ಪ್ರಕಾಶ್, ಮಂಜುನಾಥ, ಕುಲಕರ್ಣಿ, ಗುರುಪ್ರಸಾದ್, ರಾಘವೇಂದ್ರ, ಸುಜಾತ, ದ್ಯಾವಪ್ಪ, ಲತಾ, ಅನುರಾಧ, ಶರತ್ ಕುಮಾರ್, ನಂದಿನಿ, ವಕೀಲರು ಹಾಗೂ ಕಕ್ಷಿದಾರರು ಭಾಗವಹಿಸಿದ್ದರು,

## ಮಹಿಳೆ ಅಡುಗೆ ಮನೆಗೆ ಸೀಮಿತಳಲ್ಲ: ನೇತ್ರಾ ವೆಂಕಟೇಶ್

**ಚಿಕ್ಕಮಗಳೂರು:** ಮಹಿಳೆ ಕೇವಲ ಅಡುಗೆ ಮನೆಗೆ ಸೀಮಿತಳಾಗದೆ ಯುದ್ಧವಿಮಾನಗಳನ್ನು ಹಾರಿಸುವ ತನಕ ಬದಲಾಗಿದ್ದಾಳೆ; ಬೆಳೆದಿದ್ದಾಳೆ ಎಂದು ಟೌನ್ ಮಹಿಳಾ ಸಮಾಜದ ಅಧ್ಯಕ್ಷೆ ನೇತ್ರಾ ವೆಂಕಟೇಶ್ ಹೇಳಿದರು.

ಶುಕ್ರವಾರ ಟೌನ್ ಮಹಿಳಾ ಸಮಾಜದ ನೂತನ ಆಡಳಿತ ಮಂಡಳಿಯ ಅಧಿಕಾರ ಸ್ವೀಕಾರ ಮತ್ತು ಕೃತಜ್ಞತಾ ಸಮಾರಂಭದಲ್ಲಿ ಮಾತನಾಡಿದ ಅವರು, ಹಿಂದೆ ಮಹಿಳೆ ಕುಟುಂಬಕ್ಕೆ ಮೀಸಲಾಗಿದ್ದು, ಭಾವುಕತೆಯ ಜೀವನ ಅವಳದಾಗಿತ್ತು. ಆದರೆ ಇಂದು ಹಾಗಿಲ್ಲ. ವ್ಯಾಪಾರ–ವಹಿವಾಟು ವಿಚಾರದಲ್ಲೇ ಆಗಲಿ, ಸಾಮಾಜಿಕವಾಗಿ ಅಥವಾ ರಾಜಕೀಯ ವಿಚಾರದಲ್ಲೇ ಆಗಲಿ ಬೆಳೆಯುತ್ತಿದ್ದಾಳೆ. ಇದು ಅತ್ಯಂತ ಸಂತಸದ ಸಂಗತಿ ಎಂದರು.

ಭವಿಷ್ಯದಲ್ಲಿ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವುದಕ್ಕೆ ಪೂರಕವಾಗಿ ವೈವಿಧ್ಯಮಯ ತರಬೇತಿ ಕಾರ್ಯಕ್ರಮಗಳನ್ನು ನುರಿತ ತಜ್ಞರಿಂದ ಹಮ್ಮಿಕೊಳ್ಳಲಾಗುವುದು. ಆ ಮೂಲಕ ಮಹಿಳೆ ಇನ್ನಷ್ಟು ಅಭಿವೃದ್ಧಿ ಸಾಧಿಸಬೇಕು ಎನ್ನುವುದು ಈ ಉದ್ದೇಶದ ಹಿಂದಿರುವ ಚಿಂತನೆ ಎಂದು ತಿಳಿಸಿದರು.

ಸಾಮಾಜಿಕ ಸಂಸ್ಥೆಗಳನ್ನು ಹುಟ್ಟು ಹಾಕುವುದು ಬಹಳ ಸುಲಭ; ಆದರೆ ಅದನ್ನು ಮುನ್ನಡೆಸಿಕೊಂಡು ಹೋಗುವುದು ಬಹಳ ಪ್ರಯಾಸದ ಕೆಲಸ. ಟೌನ್ ಮಹಿಳಾ ಸಮಾಜ ಮುಂದಿನ ವರ್ಷ 100ನೇ ವರ್ಷಕ್ಕೆ ಪಾದಾರ್ಪಣೆ ಮಾಡಲಿದೆ. ಸಂಸ್ಥೆಯ ಸಂಸ್ಥಾಪಕರು, ಹಿಂದಿನ ಅಧ್ಯಕ್ಷರು, ನಿರ್ದೇಶಕರುಗಳು, ಸದಸ್ಯರುಗಳು ತಮ್ಮ ತನು, ಮನ, ಧನದೊಂದಿಗೆ ಪರಿಶ್ರಮ ವಹಿಸಿ ಕಾರ್ಯ ನಿರ್ವಹಿಸಿದ ಪರಿಣಾಮವಾಗಿ



**ಟೌನ್ ಮಹಿಳಾ ಸಮಾಜದ ನೂತನ ಆಡಳಿತ ಮಂಡಳಿಯ ಅಧಿಕಾರ ಸ್ವೀಕಾರ ಮತ್ತು ಕೃತಜ್ಞತಾ ಸಮಾರಂಭವನ್ನು ಹಿರಿಯ ಸದಸ್ಯರುಗಳಾದ ಗಾಯತ್ರಿ ಗೋವಿಂದಸ್ವಾಮಿ ಹಾಗೂ ಸುಲೋಚನಾ ಶೇಖರ್ ಉದ್ಘಾಟಿಸಿದರು.**

ಈ ಸಮಾಜ 100 ಸಂವತ್ಸರಗಳನ್ನು ತಲುಪಿದೆ ಎಂದು ಹೇಳಿದರು.

ಚುನಾವಣೆ ಸಂದರ್ಭದಲ್ಲಿ ಸಮಾಜದ ಸದಸ್ಯರು ಮತ ಚಲಾಯಿಸುವುದಕ್ಕೆ ಮಾತ್ರ ಸೀಮಿತವಾಗದೆ ಅಭಿವೃದ್ಧಿ ಸಲುವಾಗಿ ಕೈಗೊಳ್ಳುವ ಎಲ್ಲಾ ಕಾರ್ಯಕ್ರಮಗಳಿಗೆ ಆಡಳಿತ ಮಂಡಳಿ ಜೊತೆ ಕೈಜೋಡಿಸಬೇಕು. ಚುನಾವಣೆ ಸಂದರ್ಭದಲ್ಲಿ ತಮ್ಮ ತಂಡದ ಎಲ್ಲಾ 17 ಸದಸ್ಯರನ್ನು ಆಯ್ಕೆ ಮಾಡಿರುವುದಕ್ಕೆ ಕೃತಜ್ಞತೆ ವ್ಯಕ್ತಪಡಿಸಿದರು.

ಸ್ವಾಗತಿಸಿದ ಸಮಾಜದ ಪ್ರಧಾನ ಕಾರ್ಯದರ್ಶಿ ಶುಭದಾ ಗೌಡ ಮಾತನಾಡಿ, ಟೌನ್ ಮಹಿಳಾ ಸಮಾಜದ ಆಡಳಿತ ಮಂಡಳಿ ಏನೇ ತೀರ್ಮಾನ ಕೈಗೊಂಡರೂ ಅದು ಅಭಿವೃದ್ಧಿಯ ಪರವಾಗಿರುತ್ತದೆ. ಸದಸ್ಯರುಗಳು ಆಡಳಿತ ಮಂಡಳಿಯ ಜೊತೆಗೆ ಬಿಡುವಿನ ವೇಳೆಯಲ್ಲಿ ತೊಡಗಿಸಿಕೊಂಡು ಸೂಕ್ತ ಸಲಹೆ–ಸಹಕಾರ ನೀಡಬೇಕೆಂದು ಕೋರಿದರಲ್ಲದೆ, ಕಾರ್ಯ ನಿರ್ವಹಣೆಯಲ್ಲಿ ಲೋಪ ಕಂಡರೂ ಅವುಗಳ ಬಗ್ಗೆ ತಿಳಿ ಹೇಳಬೇಕು ಎಂದರು.

ಇದೇ ವೇಳೆ ಕಾಲೇಜಿಗೆ ಹಸಿರು ದೇಣಿಗೆ ನೀಡಿದ ದಾನಿಗಳನ್ನು ಗೌರವಿಸಲಾಯಿತು. ಸಮಾಜದಿಂದ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಹಿರಿಯ ಸದಸ್ಯರುಗಳಾದ ಗಾಯತ್ರಿ ಗೋವಿಂದಸ್ವಾಮಿ ಹಾಗೂ ಸುಲೋಚನಾ ಶೇಖರ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಖಜಾಂಚಿ ಗೀತಾ ಸಿಂಗ್ ಹಾಗೂ ಇತರ ನಿರ್ದೇಶಕರುಗಳು ಉಪಸ್ಥಿತರಿದ್ದರು. ಭವಾನಿ ಕಾರ್ಯಕ್ರಮ ನಿರೂಪಿಸಿದರು. ರೀನಾ ಸುಚೇಂದ್ರ ವಂದಿಸಿದರು.

## ಮೀನು ಕೃಷಿಕರಿಂದ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ವಿಜಯನಗರ (ಹೊಸಪೇಟೆ):** 2025–26 ಸಾಲಿನ ಮೀನುಗಾರಿಕೆ ಇಲಾಖೆ ವತಿಯಿಂದ ಜಿಲ್ಲಾ ಪಂಚಾಯಿತಿಯ ಯೋಜನೆಗಳಡಿ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮೀನು ಕೃಷಿಕರಿಗೆ 10 ಸಾವಿರ ರೂ. ವೆಚ್ಚದಲ್ಲಿ ಉಚಿತ ಮೀನುಗಾರಿಕೆ ಸಲಕರಣೆ ಕಿಟ್‌ಗಳನ್ನು ವಿತರಿಸಲಾಗುವುದು. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ ಮತ್ಸ್ಯವಾಹಿನಿ ಯೋಜನೆಯಡಿ ಐಸ್ ಬಾಕ್ಸೊಂದಿಗೆ ಮೊಪೆಡ್ ಖರೀದಿಸಲು ಸಹಾಯಧನ ನೀಡಲಾಗುತ್ತದೆ.

ಆಗಸ್ಟ್ 16 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ನಿಗದಿಪಡಿಸಲಾಗಿದೆ. ಅರ್ಹ ಅರ್ಜಿದಾರರು ಅಗತ್ಯ ದಾಖಲೆಗಳೊಂದಿಗೆ ವೆಬ್‌ಸೈಟ್ https://vijayanagara.nic.in ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು. ಅಥವಾ ಆಯಾ ತಾಲೂಕಿನ ಮೀನುಗಾರಿಕೆ ಇಲಾಖೆಯ ಕಚೇರಿಯ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರನ್ನು ಅಥವಾ ಜಿಲ್ಲೆಯ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೈವಿಕ ಇಂಧನ ಕ್ಷೇತ್ರದಲ್ಲಿ ಸಮಗ್ರ ಮತ್ತು ಸುಸ್ಥಿರ ಬೆಳವಣಿಗೆಯನ್ನು ಸಾಧಿಸಲು ಸಂಶೋಧನೆ ಮತ್ತು ತಾಂತ್ರಿಕ ಸಂಸ್ಥೆಗಳಿಂದ ಮಾತ್ರ ಸಾಧ್ಯ – ಎಸ್.ಈ.ಸುಧೀಂದ್ರ

**ಶಿವಮೊಗ್ಗ :** ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಮಾನ್ಯ ಅಧ್ಯಕ್ಷರಾದ ಶ್ರೀ ಎಸ್ ಈ ಸುಧೀಂದ್ರ ಅವರು ದಿನಾಂಕ 2.08.2025 ರಂದು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಭಾರತೀಯ ವಿಜ್ಞಾನ ಮಂದಿರ, ಬೆಂಗಳೂರು ಹಾಗೂ ಜವಹರಲಾಲ್ ನೆಹರು ಕಾಲೇಜ್ ಆಫ್ ಇಂಜಿನಿಯರಿಂಗ್, ಶಿವಮೊಗ್ಗ ಅವರ ಸಹಯೋಗದಲ್ಲಿ ಆಯೋಜಿಸಲಾಗಿರುವ 48 ನೇ ಆಯೋಜಿಸಲಾಗಿರುವ 48 ನೇ ಸ್ಟೂಡೆಂಟ್ ಪ್ರಾಜೆಕ್ಟ್ ಪ್ರೋಗ್ರಾಮ್(ಖಕಕ) ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಅವರು ಮಾತನಾಡುತ್ತಾ, ಈ ಸಮಾರೋಪ ಕಾರ್ಯಕ್ರಮಕ್ಕೆ

ಮುಖ್ಯ ಅತಿಥಿಯನ್ನಾಗಿ ಆಹ್ವಾನಿಸಿರುವುದು ಹಾಗೂ ಇದೇ ಸಂದರ್ಭದಲ್ಲಿ ಮಂಡಳಿಯ ಬಿ ಆರ್ ಐ ಡಿ ಸಿ ಕೇಂದ್ರದಲ್ಲಿ ಅಂತರರಾಷ್ಟ್ರೀಯ ಜೈವಿಕ ಇಂಧನ ದಿನಾಚರಣೆಯನ್ನು ಜೈವಿಕ ಇಂಧನ ಸಸಿಗಳನ್ನು ನೀಡುವುದರ ಮೂಲಕ ಹಾಗೂ ವಾಹನಗಳಿಗೆ ಬಯೋ ಡೀಸೆಲ್ ಹಾಕುವುದರ ಮೂಲಕ ಆಚರಣೆ ಮಾಡಿದ್ದಕ್ಕೂ ಧನ್ಯವಾದಗಳನ್ನು ತಿಳಿಸಿದರು.

ಜವಹರಲಾಲ್ ನೆಹರು ಕಾಲೇಜ್ ಆಫ್ ಇಂಜಿನಿಯರಿಂಗ್ ಸಂಸ್ಥೆಯ ಬಗ್ಗೆ ಮಾತನಾಡುತ್ತಾ, ಈ ತಾಂತ್ರಿಕ ಸಂಸ್ಥೆ ಸ್ವಾತಂತ್ರ್ಯ ಪೂರ್ವ1946 ರಲ್ಲಿ ಪ್ರಾರಂಭವಾಗಿದ್ದು,44 ವರ್ಷಗಳ ಇತಿಹಾಸವನ್ನು ಹೊಂದಿದೆ. ಬೆಳಗಾವಿ ತಾಂತ್ರಿಕ ವಿಶ್ವವಿದ್ಯಾಲಯದಡಿ ಬರುವ 233 ಕಾಲೇಜುಗಳ ಪೈಕಿ 5ನೇ ಸ್ಥಾನದಲ್ಲಿರುವುದು ಹೆಮ್ಮೆಯ ಸಂಗತಿಯಾಗಿದೆ. ಜೈವಿಕ ಇಂಧನ ಪಿತಾಮಹ ಸರ್ ರುಥಾಲ್ಫ್ ಡೀಸೆಲ್ ಅವರ ನೆನಪಿನಲ್ಲಿ ಪ್ರತಿವರ್ಷ ಆಗಸ್ಟ್ ತಿಂಗಳಲ್ಲಿ ಆಚರಿಸಲಾಗುತ್ತಿರುವ ಅಂತರಾಷ್ಟ್ರೀಯ ಜೈವಿಕ ಇಂಧನ ದಿನಾಚರಣೆಗೆ, ಜೆಎನ್ಸಿಯ ಬಿಆರ್‌ಐಡಿಸಿ ಕೇಂದ್ರದಲ್ಲಿ ಜೈವಿಕ ಇಂಧನ ಸಸಿಗಳನ್ನು ನೆಡುವುದು, ವಾಹನಗಳಿಗೆ ಜೈವಿಕ ಇಂಧನ ಹಾಕುವುದರ ಮೂಲಕ ಚಾಲನೆ ನೀಡಿರುವುದು ನನಗೆ ಸಂತೋಷದ ಹಾಗೂ ಹೆಮ್ಮೆಯ ವಿಚಾರವಾಗಿದೆ.

01.8 .2025 , ರಂದು ರಾಜ್ಯದ ವಿವಿಧ




ಇಂಜಿನಿಯರಿಂಗ್ ಸಂಸ್ಥೆಗಳ ಮತ್ತು ಮ್ಯಾನೇಜ್ಮೆಂಟ್ ಸಂಸ್ಥೆಗಳ ವಿದ್ಯಾರ್ಥಿಗಳು ಮಂಡಿಸಿರುವ ಸ್ಟೂಡೆಂಟ್ ಪ್ರಾಜೆಕ್ಟ್ ಗಳು, ಎಕ್ಸಿಬಿಷನ್ ಹಾಗೂ ಪೋಸ್ಟರ್ ಪ್ರೆಸೆಂಟೇಶನ್ ಗಳ ಮೌಲ್ಯಮಾಪನ ಕಾರ್ಯ ಮುಗಿದಿದ್ದು, ಇಂದು ಈ ಸಮಾರೋಪ ಸಮಾರಂಭದಲ್ಲಿ ಬಹುಮಾನ ವಿತರಣೆ ಹಾಗೂ ಪ್ರಶಸ್ತಿ ಪತ್ರಗಳ ವಿತರಣೆ ಅಂತಿಮ ಘಟ್ಟದ ಕಾರ್ಯಕ್ರಮ ಜರಗುತ್ತಿದ್ದು, ಈ ರಾಜ್ಯ ಮಟ್ಟದ ವಿಜ್ಞಾನ ಮತ್ತು ತಾಂತ್ರಿಕತೆಯ ಪ್ರದರ್ಶನವು ಮಹತ್ತರ ಮತ್ತು ಇಂದಿನ ಅವಶ್ಯಕತೆಗಳನ್ನು ಪೂರೈಸುವಲ್ಲಿ ಯಶಸ್ವಿಯಾಗಲಿದೆ ಎಂದು ನಂಬಿದ್ದೇನೆ. ಈ ಕಾರ್ಯಕ್ರಮಕ್ಕೆ ಅಸ್ಸಾಂ, ಕೇರಳ ರಾಜ್ಯಗಳ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಗಳಿಂದ ವಿಜಯ್ ಕೃಷ್ಣ ಮಲ್ಹೋತರ, ಇಬ್ರಾಹಿ ಇಬ್ರಾಹಿಂ ಬತ್ತಿಸ್ ಅವರನ್ನು ಸ್ವಾಗತಿಸಿ ಅಭಿನಂದಿಸಿದರು. ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ವಿಜ್ಞಾನ ಮತ್ತು ತಾಂತ್ರಿಕತೆಯ ಅಭಿವೃದ್ಧಿ ರಾಜ್ಯದ ಎಲ್ಲಾ ರಂಗಗಳಲ್ಲಿನ ಮುಂದುವರಿಕೆಗೆ ಅವರ ದೂರ ದೃಷ್ಟಿ ಕಾರಣ ಎಂದು ತಿಳಿಸಿದರು. ಉನ್ನತ ಶಿಕ್ಷಣ ಸಚಿವರಾದ ಡಾ. ಎಂ ಸುಧಾಕರ್ ಅವರು ಉನ್ನತ ಶಿಕ್ಷಣ ಅದರಲ್ಲೂ ಮುಖ್ಯವಾಗಿ ವಿಜ್ಞಾನ ಮತ್ತು ತಾಂತ್ರಿಕ ಶಿಕ್ಷಣಕ್ಕೆ ಇವತ್ತು ನೀಡಿದ್ದು, ಶಿವಮೊಗ್ಗ ಜಿಲ್ಲೆಯವರೇ ಆದ ರಾಜ್ಯದ ಪ್ರಾಥಮಿಕ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪನವರ ಆಕಾಂಕ್ಷೆ ಪ್ರಾಥಮಿಕ ಶಿಕ್ಷಣದಿಂದಲೇ ಮಕ್ಕಳಲ್ಲಿ ವಿಜ್ಞಾನ ಮತ್ತು ತಾಂತ್ರಿಕತೆಯ ಕುರಿತು ಆಸಕ್ತಿ ಬೆಳೆಸುವುದಾಗಿದ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯು 2010 – 11ರಿಂದ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯೊಂದಿಗೆ ಕೈಜೋಡಿಸಿದ್ದು , ಒಡಂಬಡಿಕೆ ಮೂಲಕ ಕೆ ಎಸ್ ಸಿ ಎಸ್ ಟಿ ಬಯೋಫ್ಯೂಯಲ್ ಸೆಲ್ ನಿರಂತರವಾಗಿ ಮಂಡಳಿಯ ಸಹಯೋಗದಲ್ಲಿರುವುದು ಹೆಮ್ಮೆಯ ಮತ್ತು ವಿಜ್ಞಾನ ಮತ್ತು ತಾಂತ್ರಿಕತೆಗೆ ಆದ್ಯತೆ ನೀಡಿರುವುದು ಪ್ರಮುಖ ಅಂಶವಾಗಿದೆ. ಮಂಡಳಿ ಇದುವರೆಗೆ ಕೆ ಎಸ್ ಸಿ ಎಸ್ ಟಿ ಗೆ 1.50 ಕೋಟಿಗೂ ಹೆಚ್ಚಿನ ಅನುದಾನವನ್ನು ನೀಡಿದ್ದು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅನುದಾನವನ್ನು ವಿಜ್ಞಾನ ಮತ್ತು ತಾಂತ್ರಿಕ ಪ್ರಾಜೆಕ್ಟ್ ಗಳ ಅನುಷ್ಠಾನಕ್ಕಾಗಿ ಒದಗಿಸಲಿದೆ ಎಂದು ಈ ಸಂದರ್ಭದಲ್ಲಿ ಹೇಳಬಯಸಿದ್ದೇನೆ. ಎಸ್ ಸಿ ಎಸ್ ಟಿ ಹಾಗೂ ಕೆ ಎಸ್ ಬಿ ಡಿ ಬಿ ಒಂದೇ ಫ್ಯಾಮಿಲಿಯಂತೆ ಜೈವಿಕ ಇಂಧನ ಕಾರ್ಯಕ್ಷೇತ್ರಗಳ ಅನುಷ್ಠಾನ ಪ್ರಕ್ರಿಯೆಯಲ್ಲಿ ಕಾರ್ಯನಿರ್ವಹಿಸುತ್ತಾ ಕ್ರಿಯಾಶೀಲವಾಗಿ ಮುಂದುವರಿಯುತ್ತಿರುವುದನ್ನು ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ನಾನು ಹೇಳಲೇಬೇಕಾದ ಹಾಗೂ ಅಭಿನಂದಿಸಬೇಕಾದ ವಿಷಯವಾಗಿದೆ.

ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯು ತಮಗೆಲ್ಲರಿಗೂ ತಿಳಿದಿರುವಂತೆ ರಾಜ್ಯದಲ್ಲಿ ಕ್ರಮಗಳ ಕುರಿತು ಅರಿವು, ಜಾಗೃತಿ ಮೂಡಿಸಲು ಕಾರ್ಯಾಗಾರಗಳು, ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಸಮ್ಮೇಳನಗಳು, ಮಾಹಿತಿ ಹಾಗೂ ಪ್ರಾತ್ಯಕ್ಷಿಕೆಗಳನ್ನು ನೀಡಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಬಿ ಆರ್ ಐ ಡಿ ಸಿ ಕೇಂದ್ರಗಳು, ನಾಲ್ಕು ಕಂದಾಯ ವಿಭಾಗಗಳಲ್ಲಿ ಜೈವಿಕ ಇಂಧನ ಉದ್ಯಾನಗಳು, ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯ ಜಿಕೆವಿಕೆಯಲ್ಲಿ ಅಂತರಾಷ್ಟ್ರೀಯ ಮಟ್ಟದ ಜೈವಿಕ ಇಂಧನ ಸಂಶೋಧನೆ ಮತ್ತು ಗುಣಮಟ್ಟ ಖಾತ್ರಿ ಪ್ರಯೋಗ ಶಾಲೆ, 12 ಜಿಲ್ಲೆಗಳಲ್ಲಿ ಸ್ವಯಂಸೇವಾ ಸಂಸ್ಥೆಗಳೊಂದಿಗೆ ಸಹಯೋಗ ಮತ್ತು ಅತಿ ಮುಖ್ಯವಾಗಿ ವಿಜ್ಞಾನ ಮತ್ತು ತಾಂತ್ರಿಕತೆಯ ವಿಭಾಗದಲ್ಲಿ ಕೆ ಎಸ್ ಸಿ ಎಸ್ ಟಿ ಯೊಂದಿಗೆ ಒಡಂಬಡಿಕೆ ತಮಗೆಲ್ಲರಿಗೂ ತಿಳಿದ ವಿಷಯವಾಗಿದೆ.ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯು 2010 – 11ರಿಂದ ಕ್ಷೇತ್ರದಲ್ಲಿ ವಿದ್ಯಾರ್ಥಿಗಳು ಸಂಶೋಧನೆ ಕೈಗೊಂಡು, ಸಂಶೋಧನೆಗಳ ಪ್ರಬಂಧಗಳನ್ನು ಮಂಡಿಸಲು, ಎಕ್ಸಿಬಿಷನ್ ಹಾಗೂ ಪೋಸ್ಟರ್ ಗಳನ್ನು ಪ್ರದರ್ಶಿಸಲು ಸಹಕಾರ ನೀಡುತ್ತಾ ಬಂದಿದೆ. ನೂರಕ್ಕೂ ಹೆಚ್ಚಿನ ಎಕ್ಸಿಬಿಷನ್ ಮತ್ತು ಪೋಸ್ಟರ್ ಪ್ರೆಸೆಂಟೇಶನ್ಗಳಾಗಿರಬಹುದು ವಿದ್ಯಾರ್ಥಿಗಳು ಜೈವಿಕ ಇಂಧನ ಕ್ಷೇತ್ರದಲ್ಲಿ ತೋರಿಸಿರುವ ಅಪಾರ ಆಸಕ್ತಿ ಮತ್ತು ಜಾಗತಿಕ ಮಟ್ಟದಲ್ಲಿ ಇಂಧನ ಕ್ಷೇತ್ರದಲ್ಲಿ ಜೈವಿಕ ಇಂಧನಗಳು ತನ್ನದೇ ಆದ ಪ್ರಭಾವ ಬೀರಲು ಕೊಡುಗೆ ನೀಡಿವೆ ಎಂದರೆ ತಪ್ಪಾಗಲಾರದು.

ಇಂದಿನ ಈ ಸಮಾರೋಪ ಸಮಾರಂಭದಲ್ಲಿ ಎಸ್.ಎನ್. ನಾಗರಾಜ, ಕಾರ್ಯದರ್ಶಿಗಳು, ನಾರಾಯಣ ಸಹ ಕಾರ್ಯದರ್ಶಿಗಳು, ಪ್ರೊ. ಅಶೋಕ್ ಎಂ ರಾಯಚೂರ್, ಕಾರ್ಯದರ್ಶಿಗಳು, ಕೆ ಎಸ್ ಸಿ ಎಸ್ ಟಿ, ಡಾ. ವೈ ವಿಜಯಕುಮಾರ್, ಪ್ರಿನ್ಸಿಪಾಲ್ ಜೆಎನ್ಸಿಇ, ಕೆ.ಎಸ್ .ಬಿ.ಡಿ.ಯ ಯೋಜನಾ ಸಲಹೆಗಾರರಾದ ಡಾ.ದಯಾನಂದ ಜಿ.ಎನ್ . ಕೆ ಎಸ್ ಸಿ ಎಸ್ ಟಿ ಸೀನಿಯರ್ ಪ್ರಾಜೆಕ್ಟ್ ಇಂಜಿನಿಯರ್ ಡಾ. ಕೆ ಎನ್ ವೆಂಕಟೇಶ್, ಜೈರಾಮ್, ಡಾ. ಚೇತನ್ ಎಸ್ ಜಿ, ಡಾ. ರವಿ ಕುಮಾರ್, ಕೋರ್ಡಿನೇಟರ್ ಬಿ ಆರ್ ಐ ಡಿ ಸಿ, ಜೆ ಎಂ ಸಿ ಇ ಬೋಧಕ ಹಾಗೂ ಎಲ್ಲಾ ಸಿಬ್ಬಂದಿಗಳು, ರಾಜ್ಯದ ಎಲ್ಲಾ ಇಂಜಿನಿಯರಿಂಗ್ ಕಾಲೇಜುಗಳಿಂದ ಆಗಮಿಸಿದ್ದ ಪ್ರಾಚಾರ್ಯರು, ವಿದ್ಯಾರ್ಥಿಗಳು, ಪ್ರಾಜೆಕ್ಟ್ ಮೌಲ್ಯಮಾಪಕರು, ಮಾರ್ಗದರ್ಶಕರು ಭಾಗವಹಿಸಿದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ





# ಹೃದಯ ಜ್ಯೋತಿ

## ಹೃದಯಾಘಾತಗಳ ವಿರುದ್ಧದ ಹೋರಾಟ!

- ರಾಜ್ಯಾದ್ಯಂತ ಹೃದಯಾಘಾತದಿಂದ ಸಂಭವಿಸುವ ಸಾವಿನ ಸಂಖ್ಯೆ ಕಡಿಮೆ ಮಾಡಲು ಜಾರಿ ಮಾಡಲಾದ ಮೊದಲ ಕಾರ್ಯಕ್ರಮ
- 2.45 ಲಕ್ಷ ಇಸಿಜಿ ಪರೀಕ್ಷೆ: 3,800+ ಸ್ಟೆಮಿ ಪ್ರಕರಣಗಳ ಪತ್ತೆ
- ಡಿಜಿಟಲ್ ವ್ಯವಸ್ಥೆಯಿಂದ ತ್ವರಿತವಾಗಿ ಕೇವಲ 3.5-5 ನಿಮಿಷದಲ್ಲಿ ರೋಗ ನಿಶ್ಚಯ
- ಗ್ರಾಮೀಣ ಪ್ರದೇಶಗಳು, ಅತಿ ದೂರದ ಪ್ರದೇಶಗಳು ಸೇರಿದಂತೆ ಎಲ್ಲ ಜಿಲ್ಲೆಗಳಲ್ಲಿ ಯೋಜನೆ ವಿಸ್ತರಣೆ
- ಯೋಜನೆಗೆ ಗೌರವಾರ್ಥ ಡಾ|| ಪುನೀತ್ ರಾಜ್‌ಕುಮಾರ್ ಹೆಸರಿಡುವ ಮೂಲಕ ಹೃದಯಕ್ಕೆ ಸಂಬಂಧಿಸಿದ ತುರ್ತು ಕಾಳಜಿಗೆ ಉತ್ತೇಜನ

**ಸಕಾಲದ ಕಾಳಜಿ**
**ಜೀವಗಳ ಉಳಿವಿಗೆ ನಾಂದಿ**



**ಕರ್ನಾಟಕ ನವ ನಿರ್ಮಾಣಕ್ಕೆ**
**ಗ್ಯಾರಂಟಿ ಸರ್ಕಾರ...**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು


Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**